# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು: ಮಹೇಶ್ವರಿ ಭೀಮಶಿ ಭರಮಣ್ಣವರ
EDITOR: MAHESHWARI BHIMASHI BHARAMANNAVARA

BELAGAVI VARTE
KANNADA DAILY MORNING BELAGAVI

G-mail: belagavivarte1@gmail.com
epaper. belagavivarte.com
Regd No : G2/PMG/KA/NK/BM/157/26-28

Volume: 01 | Issue : 91 | SATURDAY 13-06-2026 | PRGI No : KNKAN/26/A0962 | Pages:4 | Rs.2.00 | M: 9742418836


## ಧರ್ಮಸ್ಥಳ ವಿಚಾರದಲ್ಲಿ ದೊಡ್ಡ ಷಡ್ಯಂತ್ರ: ಸತ್ಯಾಸತ್ಯತೆ ಹೊರಗೆ ಬರಬೇಕು– ಬಿ.ವೈ. ವಿಜಯೇಂದ್ರ



ಬೆಂಗಳೂರು: ಧರ್ಮಸ್ಥಳ ಮಂಜುನಾಥೇಶ್ವರ ಸ್ವಾಮಿಯ ಸನ್ನಿಧಿಯಲ್ಲಿ ಕಳಂಕ ತರುವ, ಹಿಂದೂಗಳ ಧಾರ್ಮಿಕ ಶ್ರದ್ಧೆಗೆ ಕೊಡಲಿ ಪೆಟ್ಟು ಕೊಡುವ ದೊಡ್ಡ ಷಡ್ಯಂತ್ರ ನಡೆದಿದೆ ಎಂದು ಶಾಸಕ ಹಾಗೂ ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ಹೇಳಿದ್ದಾರೆ.

ರಾಜ್ಯ ಬಿಜೆಪಿ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಇಂದು ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಅಂದಿನ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಯಾವುದನ್ನೂ ಪರಾಮರ್ಶೆ ಮಾಡದೇ ಯಾರೋ ಬೀದಿಯಲ್ಲಿ ಹೋಗುವವರು ಹೇಳಿದರೆಂದು ಎಸ್‌ಐಟಿ ತನಿಖೆಗೆ ಆದೇಶಿಸಿದ್ದು ಸಮರ್ಪಕ ನಿರ್ಧಾರ ಆಗಿರಲಿಲ್ಲ ಎಂದು ಆಕ್ಷೇಪಿಸಿದರು.

ಧರ್ಮಸ್ಥಳದ ಪ್ರಕರಣದಲ್ಲಿ ಸಾಕಷ್ಟು ವಿಷಯಗಳು ಈಗ ಬೆಳಕಿಗೆ ಬಂದಿವೆ. ಹಿಂದೆ ಸಿದ್ದರಾಮಯ್ಯನವರು ಮುಖ್ಯಮಂತ್ರಿಗಳಾಗಿದ್ದಾಗ ಏಕಾಏಕಿ ಎಸ್‌ಐಟಿ ತನಿಖೆಗೆ ಆದೇಶಿಸಿದಾಗ ಸಾಕಷ್ಟು ಅನುಮಾನಗಳಿಗೆ ಎಡೆ ಮಾಡಿಕೊಟ್ಟಿತ್ತು ಎಂದು ನುಡಿದರು.

ಅಂದಿನ ಮುಖ್ಯಮಂತ್ರಿಗಳು ಒಂದು ದಿನ ಮುಂಚಿತವಾಗಿ ಯಾವುದೇ ತನಿಖೆಯ ಅವಶ್ಯಕತೆ ಇಲ್ಲ ಎಂದಿದ್ದರು. ಪಟ್ಟಭದ್ರ ಹಿತಾಸಕ್ತಿಗಳು ಅವರನ್ನು ಸ್ವಗೃಹದಲ್ಲಿ ಭೇಟಿ ಮಾಡಿದ ನಂತರ ಮುಖ್ಯಮಂತ್ರಿಗಳೇ ಎಸ್‌ಐಟಿ ತನಿಖೆಗೆ ಆದೇಶಿಸಿದ್ದರು ಎಂದು ಗಮನ ಸೆಳೆದರು. ಬಿಜೆಪಿ ಹಿಂದೆ ಧರ್ಮಸ್ಥಳ ಚಲೋ ಬೃಹತ್ ಪ್ರತಿಭಟನೆ ಹಮ್ಮಿಕೊಂಡಿತ್ತು ಎಂದು ವಿವರಿಸಿದರು.

ಇದರಲ್ಲಿ ನೂರಾರು ಕೋಟಿ ಒಳಗೊಂಡದ್ದು ಈಗ ಗೊತ್ತಾಗುತ್ತಿದೆ. ನೂರಾರು ಕೋಟಿ ತೊಡಗಿಸಿಕೊಂಡ ಕಾರಣ ವಿದೇಶಿ ಶಕ್ತಿಗಳ ಕೈವಾಡದ ತನಿಖೆಯೂ ಆಗಬೇಕಿದೆ ಎಂದು ಒತ್ತಾಯಿಸಿದರು. ಕಾಂಗ್ರೆಸ್ ಸರಕಾರವು ಇಂಥ ಷಡ್ಯಂತ್ರಗಳಿಗೆ ಶಕ್ತಿ ತುಂಬುವ ಕೆಲಸ ಮಾಡಿರುವುದು ನಮಗೆ ನೋವು ತಂದಿದೆ ಎಂದು ತಿಳಿಸಿದರು. ಯಾರ್ಯಾರು ಇದರ ಹಿಂದಿದ್ದರು? ಯಾರ್ಯಾರು ಬಂಡವಾಳ ಹಾಕಿದ್ದರು? ಅಂದಿನ ಸಿಎಂ ಯಾಕೆ ಕಣ್ಮುಚ್ಚಿ ಎಸ್‌ಐಟಿ ಗೆ ಕೊಟ್ಟರು– ಇವೆಲ್ಲವೂ ಸತ್ಯಾಸತ್ಯತೆ ಹೊರಕ್ಕೆ ಬರಬೇಕು ಎಂಬುದು ನಾಡಿನ ಜನರ ಮತ್ತು ಹಿಂದೂಗಳ ಅಪೇಕ್ಷೆ ಎಂದು ತಿಳಿಸಿದರು.

ಇನ್ನು ಮತದಾರರ ಪಟ್ಟಿ ಸಮಗ್ರ ಪರಿಷ್ಕರಣೆ ಎಸ್‌ಐಟಿ ಬಗ್ಗೆ ಚರ್ಚೆಗಳಾಗಿವೆ. ಕೇಂದ್ರ ಚುನಾವಣಾ ಆಯೋಗ ತೀರ್ಮಾನಿಸಿದ ಬಳಿಕ ಎಸ್‌ಐಟಿ ನಡೆಯುತ್ತಿದ್ದು, ರಾಜ್ಯ ಸರಕಾರ ಇದಕ್ಕೆ ಕಲ್ಲು ಹಾಕುವ ಕೆಲಸ ಮಾಡುತ್ತಿದೆ ಎಂಬ ಅಭಿಪ್ರಾಯ ಎಲ್ಲ ಮುಖಂಡರಿಂದ ವ್ಯಕ್ತವಾಗಿದೆ. ರಾಜ್ಯ ಸರ್ಕಾರ ಬಿಎಎಲ್‌ಒಗಳಿಗೆ ಸಮರ್ಪಕ ಆದೇಶ, ಮಾರ್ಗದರ್ಶನ ಮಾಡುತ್ತಿಲ್ಲ. ಡೂಪ್ಲಿಕೇಟ್ ಹೆಸರು, ಸತ್ತವರ ಹೆಸರು ಕೈಬಿಡುವ ಕೆಲಸ ನಡೆಯಬೇಕಿದೆ. ಬಿಎಎಲ್‌ಒಗಳನ್ನು ದುರುಪಯೋಗ ಪಡಿಸಿಕೊಂಡು, ಸ್ವಚ್ಛಗೊಳಿಸುವ ಕಾರ್ಯ ಕರ್ನಾಟಕದಲ್ಲಿ ಸಮರ್ಪಕವಾಗಿ ಆಗುತ್ತಿಲ್ಲ ಎಂಬ ಆಕ್ಷೇಪ ಇದೆ. ಮುಂದಿನ ದಿನಗಳಲ್ಲಿ ನಮ್ಮ ನಡೆ ಯಾವ ರೀತಿ ಇರಬೇಕೆಂಬ ಬಗ್ಗೆ ಚರ್ಚೆ ಮಾಡಿದ್ದೇವೆ ಎಂದು ವಿವರ ನೀಡಿದರು.

## ನನಗೆ ಕ್ರೀಡಾ ಇಲಾಖೆ ಕೊಟ್ಟಿದ್ದರೆ ಕ್ರಾಂತಿ ಮಾಡುತ್ತಿದ್ದೆ: ಸತೀಶ್ ಜಾರಕಿಹೊಳಿ

ಬೆಂಗಳೂರು: ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದ ಕಾಂಗ್ರೆಸ್ ಸರ್ಕಾರದಲ್ಲಿ ಮೊದಲ ಹಂತದ ಸಚಿವ ಸಂಪುಟ ರಚನೆಯಲ್ಲಿ ಕೆಲವು ಸಚಿವರು ತಮಗೆ ಹಂಚಿಕೆಯಾದ ಖಾತೆ ಬಗ್ಗೆ ಖ್ಯಾತೆ ತೆಗೆದಿದ್ದಾರೆ. ಇನ್ನು ಎರಡನೇ ಹಂತದ ಸಂಪುಟ ವಿಸ್ತರಣೆ ಕಸರತ್ತು ಮುಂದು ವರಿದಿದೆ. ಸಚಿವಾಕಾಂಕ್ಷಿಗಳು ಮಂತ್ರಿಗಿರಿ ಗಾಗಿ ಲಾಬಿ ನಡೆಸುತ್ತಿದ್ದಾರೆ. ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಅವರು ದೆಹಲಿಯಲ್ಲಿದ್ದಾರೆ.

ಮೊದಲ ಹಂತದ ಸಂಪುಟ ವಿಸ್ತರಣೆಯಲ್ಲಿ ರಾಮಲಿಂಗಾರೆಡ್ಡಿ ಬೆಂಗಳೂರು ನಗರಾಭಿವೃದ್ಧಿ ಖಾತೆ ಸಿಗದಿದ್ದಕ್ಕೆ ರಾಜೀನಾಮೆ ನೀಡಿ, ಮನವೊಲಿಕೆ ಬಳಿಕ ರಾಜೀನಾಮೆ ವಾಪಾಸ್ ಪಡೆದುಕೊಂಡಿದ್ದಾರೆ. ಕೆ.ಹೆಚ್.ಮುನಿಯಪ್ಪ ಕೃಷಿ ಹಾಗೂ ಸಹಕಾರಿ ಖಾತೆಗೆ ಪಟ್ಟು ಹಿಡಿದಿದ್ದಾರೆ. ಕೃಷ್ಣ ಬೈರೇಗೌಡ ನಗರಾಭಿವೃದ್ಧಿಯಲ್ಲಿ ಬಿಡಿಎ ಇಲ್ಲದಿರುವುದಕ್ಕೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಲೋಕೋ ಪಯೋಗಿ ಇಲಾಖೆ ಸಚಿವರಾಗಿರುವ ಸತೀಶ್ ಜಾರಕಿಹೊಳಿ ತಾನು ಹೆಚ್ಚುವರಿ ಯಾಗಿ ಕ್ರೀಡಾ ಖಾತೆಯನ್ನು ಕೇಳಿದ್ದೆ ಎಂದಿದ್ದಾರೆ.

ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಲೋಕೋಪಯೋಗಿ ಜೊತೆಗೆ ಕ್ರೀಡಾ ಇಲಾಖೆ ಕೇಳಿದ್ದೆ. ಕ್ರೀಡಾ ಇಲಾಖೆ ಕೊಟ್ಟಿದ್ದರೆ ಕ್ರಾಂತಿ ಮಾಡುತ್ತಿದ್ದೆ. ಆದರೆ ಡಿಸಿಎಂ ಪರಮೇಶ್ವರ್ ಅವರು ಈ ಖಾತೆ




ಯನ್ನು ಕೇಳಿರಬಹುದು. ಹಾಗಾಗಿ ಅವರಿಗೆ ಕೊಟ್ಟಿದ್ದಾರೆ ಎಂದರು. ನಾನು ಹೆಚ್ಚುವರಿಯಾಗಿ ಕ್ರೀಡಾ ಖಾತೆ ಕೇಳಿದ್ದೆ. ಬಹುಶಃ ಪರಮೇಶ್ವರ್ ಕೇಳಿ ತೆಗೆದುಕೊಂಡಿರಬಹುದು. ನನಗೆ ಕ್ರೀಡಾ ಖಾತೆ ಇಷ್ಟ ಇತ್ತು. ನಾನು ಪ್ರತಿ ವರ್ಷ 50 ಲಕ್ಷ ಖರ್ಚು ಮಾಡಿ ಸ್ಪೋರ್ಟ್ಸ್ ನಡೆಸುತ್ತೇನೆ. ಹಾಗಾಗಿ ಸ್ಪೋರ್ಟ್ಸ್ ಕೊಟ್ಟಿದ್ದರೆ ಕ್ರಾಂತಿ ಮಾಡುತ್ತಿದ್ದೆವು. ಕ್ರೀಡೆಯಲ್ಲಿ ರಾಜ್ಯ ನಂಬರ್ ವನ್ ಮಾಡುತ್ತಿದ್ದೇವೆ. ಹಿಂದೆಯೂ ಕ್ರೀಡಾ ಖಾತೆ ಕೇಳಿದ್ದೆವು, ಧರ್ಮಸಿಂಗ್ ಅವಧಿ ಯಲ್ಲಿ ಕೇಳಿದ್ದೆವು. ಈಗ ಪರಮೇಶ್ವರ್ ಅವರಿಗೆ ಕೊಟ್ಟಿದ್ದಾರೆ. ಅವರಿಗೆ ಕ್ರೀಡೆ ಬಗ್ಗೆ ಒಲವಿದೆ, ಅದಕ್ಕೆ ಕೇಳಿ ಪಡೆದಿರಬಹುದು ಎಂದರು.

### ಸಿದ್ದರಾಮಯ್ಯ ಜೊತೆ ಭಿನ್ನಾಭಿಪ್ರಾಯವಿಲ್ಲ

ನನ್ನ, ಸಿದ್ದರಾಮಯ್ಯ ನಡುವಿನ ಸಂಬಂಧದ ಬಗ್ಗೆ ಚರ್ಚೆ ಅನವಶ್ಯಕ. ಅವರ, ನನ್ನ ಸಂಬಂಧ ಹಾಳಾಗಿಲ್ಲ ಎಂದರು. ಮೊದಲಿನಿಂದಲೂ ನಾನೂ ಹೇಳಿದ್ದೇನೆ. ನಮ್ಮ ನಡುವೆ ಗೊಂದಲವೇ ಇಲ್ಲ. ಕೆಲವು ಐಟಿ ಸೆಲ್‌ನವರು ಸ್ವಲ್ಪ ಹೆಚ್ಚಿನ ಪ್ರಚಾರ ಮಾಡಿದರು. ನಮಗೆ ಗೊತ್ತಿರುವ ಐಟಿ ಸೆಲ್‌ನವರೇ ಹೆಚ್ಚಿನ ಪ್ರಚಾರ ಕೊಟ್ಟರು. ಅನವಶ್ಯಕ ಚರ್ಚೆ ಆಗಿದೆ. ಅದರ ಬಗ್ಗೆ ಅಹಿಂದ ಸಂಘಟನೆ ಇದ್ದೇ ಇರುತ್ತದೆ. ಪಕ್ಷವನ್ನು ಹೊರತುಪಡಿಸಿಯೂ ಸಂಘಟನೆ ಕೆಲಸ ಇದ್ದೇ ಇರುತ್ತದೆ. ಅಹಿಂದ ಸಂಘಟನೆ ಬಲಪಡಿಸಲು ಕೆಲಸ ಮಾಡುತ್ತೇನೆ ಎಂದರು.

### ವಿಧಾನಸಭೆ ಮತ್ತು ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ಅಧಿಕಾರಕ್ಕೆ– ಶಾಸಕ ಬಾಲಚಂದ್ರ ಜಾರಕಿಹೊಳಿ ಆತ್ಮವಿಶ್ವಾಸ

## ಪ್ರಧಾನಿ ನರೇಂದ್ರ ಮೋದಿಯವರ 12 ವರ್ಷಗಳ ಆಡಳಿತದ ಸಂಭ್ರಮಾಚರಣೆ ನಿಮಿತ್ತ ವಿವಿಧ ಕಾರ್ಯಕ್ರಮಗಳಿಗೆ ಚಾಲನೆ ನೀಡಿದ ಬಾಲಚಂದ್ರ ಜಾರಕಿಹೊಳಿ



**ಬೆಳಗಾವಿ ವಾರ್ತೆ ಗೋಕಾಕ:** ಪ್ರಧಾನಿ ನರೇಂದ್ರ ಮೋದಿಯವರು ದೇಶದಲ್ಲಿಯೇ ಅತೀ ದೀರ್ಘಕಾಲದ ಪ್ರಧಾನಿಯಾಗಿ ಸೇವೆ ಸಲ್ಲಿಸಿರುವ ಪ್ರೀತಿಗೆ ಪಾತ್ರರಾಗಿದ್ದು, ಸತತ 12 ವರ್ಷಗಳ ಕಾಲ ಅಧಿಕಾರದಲ್ಲಿ ಮುಂದುವರೆದಿದ್ದು, ಮುಂದಿನ 2028 ರಲ್ಲಿ ನಡೆಯುವ ಕರ್ನಾಟಕ ವಿಧಾನ ಸಭಾ ಹಾಗೂ 2029 ರಲ್ಲಿ ಜರುಗುವ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ಅಧಿಕಾರದ ಚುಕ್ಕಾಣಿ ಹಿಡಿಯಲಿದೆ ಎಂದು ಶಾಸಕ ಮತ್ತು ಬೆಮುಲ್ ಅಧ್ಯಕ್ಷ ಬಾಲಚಂದ್ರ ಜಾರಕಿಹೊಳಿಯವರು ವಿಶ್ವಾಸ ವ್ಯಕ್ತಪಡಿಸಿದರು.

ಶುಕ್ರವಾರ, ಇಲ್ಲಿನ ಎನ್‌ಎಸ್‌ಎಫ್ ಕಚೇರಿಯಲ್ಲಿ ಅರಭಾವಿ ಬಿಜೆಪಿ ಮಂಡಲವು ಪ್ರಧಾನಿಗಳ 12 ವರ್ಷಗಳ ಸಂಭ್ರಮಾಚರಣೆ ಕಾರ್ಯಕ್ರಮದ ನಿಮಿತ್ತ ವಿವಿಧ ಕಾರ್ಯಕ್ರಮಗಳಿಗೆ ಚಾಲನೆ ನೀಡಿ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿಯವರ ಸಮರ್ಥ ನೇತೃತ್ವದಲ್ಲಿ ಭಾರತವು ಜಗತ್ತಿನಲ್ಲಿಯೇ ಪ್ರಗತಿಶೀಲ ರಾಷ್ಟ್ರವಾಗಿ ಹೊರಹೊಮ್ಮುತ್ತಿದೆ ಎಂದರು.

ಮುಂದೆ 2028 ರಲ್ಲಿ ನಡೆಯುವ ವಿಧಾನಸಭಾ ಚುನಾವಣೆಯಲ್ಲಿ ರಾಜ್ಯದಲ್ಲಿ ಬಿಜೆಪಿ ಅಧಿಕಾರ ಚುಕ್ಕಾಣಿ ಹಿಡಿಯಲಿದೆ. ಅದರಂತೆ ಕೇಂದ್ರದಲ್ಲಿಯೂ ನರೇಂದ್ರ ಮೋದಿಯವರ ಮುಂದಾಳುತನದಲ್ಲಿ ದೇಶದಲ್ಲಿ ಸತತ ಮೂರನೇ ಅವಧಿಗೆ ಕಮಲ ಅರಳಿದೆ. ರಾಜ್ಯ ಮತ್ತು ಕೇಂದ್ರದಲ್ಲಿ ಬಿಜೆಪಿ ಸರ್ಕಾರವು ಆಡಳಿತದಲ್ಲಿದ್ದರೆ ಅಭಿವೃದ್ಧಿಗೆ ಅನುಕೂಲವಾಗಲಿದೆ. ಇದರಿಂದ ಮತ್ತಷ್ಟು ಶರವೇಗದಲ್ಲಿ ಪ್ರಗತಿ ಸಾಧಿಸಲು ನೆರವಾಗುತ್ತದೆ. ಬಿಜೆಪಿ ಗೆಲುವಿನಲ್ಲಿ ಕಾರ್ಯಕರ್ತರ ಪಾತ್ರ ಮುಖ್ಯವಾಗಿದೆ. ಕಾರ್ಯಕರ್ತರಿಂದ ಮಾತ್ರ ಪಕ್ಷವು ಅಧಿಕಾರಕ್ಕೆ ಬರಲು ಸಾಧ್ಯವಾಗುತ್ತದೆ ಎಂದರು.

ಪ್ರಧಾನಿ ನರೇಂದ್ರ ಮೋದಿಯವರು ದೀರ್ಘಾವಧಿ ಪ್ರಧಾನಿಯಾಗುವ ಮೂಲಕ ಈ ಹಿಂದಿನ ಪಂಡಿತ ಜವಾಹರಲಾಲ್ ನೆಹರೂ ಅವರ ದಾಖಲೆಯನ್ನು ಅಳಿಸಿ ಹಾಕಿದ್ದಾರೆ. ನಮ್ಮ ದೇಶಕ್ಕೆ ಮೋದಿಯವರಂತಹ ದಕ್ಷ, ಪಾರದರ್ಶಕ ಪ್ರಧಾನಿಗಳು ಬೇಕು. ಇನ್ನಷ್ಟು ಕಾಲ ಈ ದೇಶದ ಆಡಳಿತ ಚುಕ್ಕಾಣಿ ಹಿಡಿಯಲು ಮೋದಿಯವರಿಗೆ ದೇವರು ಇನ್ನಷ್ಟು ಅಧಿಕಾರ, ಆಯಸ್ಸು, ಶಕ್ತಿ ನೀಡಲಿ ಎಂದು ಪ್ರಾರ್ಥನೆ ಮಾಡಿಕೊಂಡರು.

ಪ್ರಧಾನಿಗಳ ಸೇವಾ ಕಾರ್ಯವನ್ನು ಜನರ ಮನೆ– ಮನೆಗಳಲ್ಲಿ ತಲುಪಲು ಸಾಕಷ್ಟು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. 12 ವರ್ಷ ಪ್ರಧಾನಿಯಾಗಿ ಕಾರ್ಯ ನಿರ್ವಹಿಸುತ್ತಿರುವದರಿಂದ ನಮ್ಮ ಎನ್‌ಎಸ್‌ಎಫ್ ಮೈದಾನದಲ್ಲಿ 12 ಸಸಿಗಳನ್ನು ನೆಡಲಾಗಿದೆ. ಇಂದಿನ ಸಸಿಗಳು ನಾಳೆ ದೊಡ್ಡ ಮರಗಳಾಗಿ ಜನರಿಗೆ ನೆರಳು ನೀಡುತ್ತವೆ. ನಮ್ಮ ಮುಂದಿನ ಪೀಳಿಗೆಗೂ ಗಿಡ– ಮರಗಳು ಹೆಮ್ಮರವಾಗಿ ಬೆಳೆದು ನಿಸರ್ಗದ ರಸದೌತನ ನೀಡುತ್ತವೆ ಎಂದು ಅವರು ತಿಳಿಸಿದರು.

ಪ್ರತಿಯೊಬ್ಬ ರೈತರು ನೈಸರ್ಗಿಕ ಕೃಷಿಯನ್ನು ಅನುಸರಿಸಬೇಕು. ರಾಸಾಯನಿಕ ಗೊಬ್ಬರ ಹಾಗೂ ಕೀಟನಾಶಕಗಳ ಬಳಕೆ ಮಾಡದೇ ಸಾವಯುವ ಕೃಷಿ ಪದ್ಧತಿಗೆ ಆದ್ಯತೆ ನೀಡಬೇಕು. ಇದರಿಂದ ಗೊಬ್ಬರ ಹಾಗೂ ಔಷಧಿಗಳ ಖರ್ಚು ಸಹ ಉಳಿತಾಯವಾಗುತ್ತದೆ. ಕೃಷಿ ಉಳಿದರೆ ದೇಶವು ಉಳಿಯುತ್ತದೆ ಎಂದು ಶಾಸಕ ಬಾಲಚಂದ್ರ ಜಾರಕಿಹೊಳಿಯವರು ನೈಸರ್ಗಿಕ ಕೃಷಿ ಕುರಿತು ಮಾರ್ಮಿಕವಾಗಿ ಮಾತನಾಡಿದರು.

ಶಾಸಕ ಬಾಲಚಂದ್ರ ಜಾರಕಿಹೊಳಿಯವರು ಅರಭಾವಿ ಮಂಡಲವು ಹಮ್ಮಿಕೊಂಡ ವಿವಿಧ ಕಾರ್ಯಕ್ರಮಗಳಿಗೆ ಚಾಲನೆ ನೀಡಿದರು.

ಅಧ್ಯಕ್ಷತೆಯನ್ನು ಅರಭಾವಿ ಬಿಜೆಪಿ ಮಂಡಲ ಅಧ್ಯಕ್ಷ ಮಹಾದೇವ ಶೆಕ್ಕಿ ವಹಿಸಿದ್ದರು.

ಬೆಳಗಾವಿ ಗ್ರಾಮಾಂತರ ಬಿಜೆಪಿ ಜಿಲ್ಲಾಧ್ಯಕ್ಷ ಸುಭಾಸ ಪಾಟೀಲ, ಓಬಿಸಿ ಮೋರ್ಚಾ ರಾಷ್ಟ್ರೀಯ ಕಾರ್ಯಕಾರಿಣಿ ಸದಸ್ಯ ಲಕ್ಷ್ಮಣ ತಪಸಿ, ಮುತ್ತೆಪ್ಪ ಮನ್ನಾಪೂರ, ಪರಸಪ್ಪ ಬಬಲಿ, ಪ್ರಮೋದ ನುಗ್ಗಾನಟ್ಟಿ, ವಿವಿಧ ಮೋರ್ಚಾಗಳ ಪದಾಧಿಕಾರಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## ರಸ್ತೆ ಕಾಮಗಾರಿಗೆ ಭೂಮಿಪೂಜೆ



**ಬೆಳಗಾವಿ ವಾರ್ತೆ ಚನ್ನಮ್ಮನ ಕಿತ್ತೂರು:** ತಾಲೂಕಿನ ಕುಲವಳ್ಳಿ ಗ್ರಾಪಂ ವ್ಯಾಪ್ತಿಯ ಸಾಗರ ಗ್ರಾಮದ ತವನಪ್ಪ ಬೆಟಗೇರಿ ಮನೆಯಿಂದ ನಿಂಗಪ್ಪ ಬಡಸದ ಮನೆವರೆಗೆ ಅಂದಾಜು ವೆಚ್ಚ 39 ಲಕ್ಷ ರೂಗಳ ಸಿಸಿ ರಸ್ತೆ ಕಾಮಗಾರಿಗೆ ಶಾಸಕ ಬಾಬಾಸಾಹೇಬ ಪಾಟೀಲ ಭೂಮಿ ಪೂಜೆ ನೇರವೇರಿಸಿದರು.

ಇದರ ಜೊತೆಗೆ ಇದೇ ಗ್ರಾಮದ ರೈತರ ಹೊಲಗಳಿಗೆ ಸಂಪರ್ಕ ಕಲ್ಪಿಸುವ ರಸ್ತೆ ಕಾಮಗಾರಿಗೂ ಚಾಲನೆ ನೀಡಲಾಯಿತು.

ನಂತರ ಅವರು ಮಾತನಾಡಿ ಈ ಕಾಮಗಾರಿ ಕಳಪೆಯಾಗದಂತೆ ಗುತ್ತಿಗೆದಾರರು ನೋಡಿಕೊಳ್ಳಬೇಕು. ನಮ್ಮ ಸರ್ಕಾರ ಮೂರು ವರ್ಷ ಆಡಳಿತ ಪೂರೈಸಿದ್ದು ಉತ್ತಮ ಆಡಳಿತ ನೀಡಿದೆ. ನೂತನ ಮುಖ್ಯಮಂತ್ರಿ ಡಿಕೆಶಿವಕುಮಾರ ಅವರ ನೇತೃತ್ವದ ಸರ್ಕಾರ ರಾಜ್ಯದ ಅಭಿವೃದ್ಧಿ ಕಲ್ಪಿಸುವ ಮಹತ್ವ ನಿರ್ಧಾರ ಕೈಗೊಂಡಿದೆ. ಬಡವ ಶ್ರೀಮಂತ ಎನ್ನದೆ ಪ್ರತಿಯೊಬ್ಬರಿಗೂ ಸರ್ಕಾರದ ಯೋಜನೆಗಳು ಮನೆಬಾಗಿಲಿಗೆ ತಲುಪಿಸುವಂತೆ ದಿಟ್ಟ ನಿರ್ಧಾರ ಕೈಗೊಂಡಿದ್ದು. ಅಧಿಕಾರ ಸ್ವೀಕರಿಸಿದ ದಿನವೇ ರಾಜ್ಯದ ಎಲ್ಲ ಮಕ್ಕಳಿಗೂ ಉಚಿತ ಬಸ್‌ಪಾಸ್ ಯೋಜನೆ ಜಾರಿಗೆ ಮಾಡಿರುವುದು ಶ್ಲಾಘನೀಯ ಎಂದರು.

ಬಹುತೇಕ ಕ್ಷೇತ್ರದ ಹಲವು ರಸ್ತೆ ಕಾಮಗಾರಿಗಳು ಪೂರ್ಣಗೊಂಡಿದ್ದು ಸಾರ್ವಜನಿಕರ ಸುಗಮ ಸಂಚಾರಕ್ಕೆ ಅನುಕೂಲ ಕಲ್ಪಿಸಲಾಗಿದ್ದು ಅಧಿಕಾರಿಗಳು ನಮ್ಮ ಜೊತೆ ಕೈಜೋಡಿಸಿ ಸಾರ್ವಜನಿಕರಿಗೆ ಅನುಕೂಲವಾಗುವಂತೆ ಉತ್ತಮ ಕಾರ್ಯ ಮಾಡುತ್ತಿದ್ದಾರೆ. ಗ್ರಾಮಗಳಲ್ಲಿ ಇನ್ನುಳಿದ ಅಭಿವೃದ್ದಿ ಕೆಲಸಗಳನ್ನು ಮಾಡಲು ನಾನು ಸದಾ ಬದ್ಧನಿದ್ದೇನೆಂದರು.

ಈ ವೇಳೆ ಬ್ಲಾಕ್ ಅಧ್ಯಕ್ಷ ಸಂಗನಗೌಡ ಪಾಟೀಲ, ಮಾಜಿ ತಾಪಂ ಸದಸ್ಯ ಮುದಕಪ್ಪ ಮರಡಿ, ಗುತ್ತಿಗೆದಾರ ಶಿವಯೋಗಿ ದೊಡಮನಿ, ಮಾಜಿ ಗ್ರಾಪಂ ಅಧ್ಯಕ್ಷ ಭೀಷ್ಟಪ್ಪ ಶಿಂದೆ, ಸುನೀಲ್ ಘೀವಾರಿ, ಅಶಪಾಕ ಹವಾಲ್ದಾರ, ದೇವಗಾಂವ ಚಂದ್ರಗೌಡ ಪಾಟೀಲ, ಬಸವರಾಜ ಎಮ್ಮಿ, ಶಿವನಪ್ಪ ಬನಜಿಗ, ಜಿಪಂ, ತಾಪಂ ಇಂಜಿನೀಯರ್ ಆರ್.ಆರ್.ಬಡಿಗೇರ, ನೆರೇಗಲ್ಲ ಸೇರಿದಂತೆ ಗ್ರಾಮಸ್ಥರಿದ್ದರು.

## 14 ರಂದು ದತ್ತಿ ಉಪನ್ಯಾಸ ಕಾರ್ಯಕ್ರಮ

**ಬೆಳಗಾವಿ ವಾರ್ತೆ ಹುಬ್ಬಳ್ಳಿ:** ಬಸವ ಕೇಂದ್ರದ ವತಿಯಿಂದ ಲಿಂಗೈಕ್ಯ ಪಂಡಿತಾರಾಧ್ಯ ಸಿದ್ದಯ್ಯ ಹುಲಿಕಂತಿಮಠ ಅವರ ಸ್ಮರಣಾರ್ಥ ರವಿವಾರ ದಿನಾಂಕ 14-06-2026 ರಂದು ಮುಂಜಾನೆ 11 ಗಂಟೆಗೆ ಗೋಕುಲ ರಸ್ತೆ, ಲೋಹಿಯಾ ನಗರದ ಗಾರ್ಡನ್ ಗೇಟ್ ಎದುರಿಗೆ ಮನೆ ನಂಬರ್ 1350, ಶರಣಾಲಯದಲ್ಲಿ ದತ್ತಿ ಉಪನ್ಯಾಸ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಬಸವ ತತ್ವ ಚಿಂತಕರಾದ ನೀಲಗಂಗಾ ಜಿ. ಹಳ್ಯಾಳ ಅವರು ಅನುಭಾವ ನೀಡಲಿದ್ದಾರೆ.

ಲಿಂಗಾಯತ ಸಮಾಜದ ಮುಖಂಡರಾದ ಅನುಸೂಯಾ ಅರಕೇರಿ ಅವರು ಅತಿಥಿಗಳಾಗಿ ಭಾಗವಹಿಸುವರು. ಬಸವ ಕೇಂದ್ರದ ಅಧ್ಯಕ್ಷ ಪ್ರೊ ಜಿ.ಬಿ.ಹಳ್ಯಾಳ ಅಧ್ಯಕ್ಷತೆ ವಹಿಸಲಿದ್ದಾರೆ. ದತ್ತಿದಾನಿಗಳಾದ ಉಮಾ ಹುಲಿಕಂತಿಮಠ ಹಾಗೂ ಬಸವ ತ್ರಿವಿಧಿ, ಪವಿತ್ರಾ, ರವಿಚಂದ್ರ ಹುಲಿಕಂತಿಮಠ, ಪ್ರೊ ಎಸ್ ವಿ ಪಟ್ಟಣಶೆಟ್ಟಿ, ಕೆ ಎಸ್ ಇನಾಮತಿ ಉಪಸ್ಥಿತರಿರುವರು ಎಂದು ಬಸವ ಪರಿಸರ ಸಂರಕ್ಷಣಾ ಸಮಿತಿಯ ಕಾರ್ಯದರ್ಶಿ ಹಾಗೂ ಗ್ರಂಥಪಾಲಕ ಡಾ. ಸುರೇಶ ಡಿ. ಹೊರಕೇರಿ ಅವರು ತಿಳಿಸಿದ್ದಾರೆ. ಆಸಕ್ತರು, ಬಸವಾಭಿಮಾನಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಬೇಕೆಂದು ವಿನಂತಿಸಿದ್ದಾರೆ.

## ನಮ್ಮ ರಾಜ್ಯದ ಭಾಷೆ, ಭೂಮಿ, ನೆಲ–ಜಲ ವಿಚಾರದಲ್ಲಿ ರಾಜಿಯಿಲ್ಲ, ವಿಜಯ್ ಅವರು ಬಂದು ದೇವರ ದರ್ಶನ ಪಡೆದುಕೊಂಡು ಹೋಗಲಿ: ಪ್ರಿಯಾಂಕ್ ಖರ್ಗೆ

**ಬೆಳಗಾವಿ ವಾರ್ತೆ ಬೆಂಗಳೂರು:** ತಮಿಳು ನಾಡು ಸಿಎಂ ಅವರು ಇಂದು ಕೊಲ್ಲೂರಿಗೆ ದೇವರ ದರ್ಶನ ಮಾಡಲು ಬರುತ್ತಿದ್ದಾರೆ, ಬರಲಿ, ಅವರು ಬಂದ ತಕ್ಷಣ ನಾವು ನಮ್ಮ ಹಕ್ಕನ್ನು ಬಿಟ್ಟುಕೊಡುತ್ತಿಲ್ಲ ಎಂದರು.

ನಮ್ಮ ರಾಜ್ಯದ ಭಾಷೆ, ಭೂಮಿ ಮತ್ತು ನೀರಿನ ವಿಚಾರದಲ್ಲಿ ನಾವು ಯಾವುದೇ ರಾಜಿ ಮಾಡಿಕೊಳ್ಳುವುದಿಲ್ಲ. ಅವರು ಬಂದು ದೇವರ ಆಶೀರ್ವಾದ ಪಡೆದುಕೊಂಡು ಹೋಗಲಿ ಎಂದು ತಮಿಳುನಾಡು ಮುಖ್ಯಮಂತ್ರಿ ಜೋಸೆಫ್ ವಿಜಯ್ ಅವರು ಇಂದು ಕೊಲ್ಲೂರಿನ ದೇವಾಲಯಕ್ಕೆ ಭೇಟಿ ನೀಡುತ್ತಿರುವ ಹಿನ್ನೆಲೆಯಲ್ಲಿ ಕರ್ನಾಟಕ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ.

ತಮಿಳು ನಾಡು ಸಿಎಂ ಅವರು ಇಂದು ಕೊಲ್ಲೂರಿಗೆ ದೇವರ ದರ್ಶನ ಮಾಡಲು ಬರುತ್ತಿದ್ದಾರೆ, ಬರಲಿ, ಅವರು ಬಂದ ತಕ್ಷಣ ನಾವು ನಮ್ಮ ಹಕ್ಕನ್ನು ಬಿಟ್ಟುಕೊಡುತ್ತಿಲ್ಲ, ನಾಡಿನ ಭಾಷೆ, ನೆಲ, ಜಲದ ಬಗ್ಗೆ ಸುಪ್ರೀಂ ಕೋರ್ಟ್ ಸರಿಯಾದ ಆದೇಶ ನೀಡಿದೆ, ನಾವು ಅದರ ಪ್ರಕಾರ ನಡೆದುಕೊಳ್ಳುತ್ತೇವೆ.

ಅದರಲ್ಲಿ ರಾಜಿಯಿಲ್ಲ, ಅವರು ಬಯಸುವುದನ್ನು ದೇವರಲ್ಲಿ ಕೇಳಿಕೊಳ್ಳಲಿ,ನಾವು ಬೇಡ ಎಂದು ಆಕ್ಷೇಪಿಸುವುದೇಕೆ ಎಂದು ಕೇಳಿದರು.

# ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ (ಜಿ.ಟಿ.ಟಿ.ಸಿ)ಯಲ್ಲಿ 2026–27 ನೇಯ ಸಾಲಿನ ಕೌಶಲ್ಯ ಆಧಾರಿತ ಡಿಪ್ಲೋಮಾ ತರಗತಿಗಳನ್ನು ಉದ್ಘಾಟಿಸಿದ ಡಿಸಿ ಸ್ನೇಹಲ್ ಆರ್




**ಬೆಳಗಾವಿ ವಾರ್ತೆ ಧಾರವಾಡ:** ಧಾರವಾಡದ ಸರಕಾರಿ ಉಪಕರಣಗಾರ ಮತ್ತು ತರಬೇತಿ ಕೇಂದ್ರ ದಲ್ಲಿ ಈ ವರ್ಷದ ಹೊಸ ಡಿಪ್ಲೋವಾ ತರಗತಿಗಳನ್ನು ಜಿಲ್ಲಾಧಿಕಾರಿ ಸ್ನೇಹಲ್. ಆರ್. ಅವರು ಉದ್ಘಾಟಿಸಿ, ಮಾತನಾಡಿ ದರು.

ಭಾರತ ಪ್ರಪಂಚದ ಅತಿ ಯುವ ದೇಶ ವಾಗಿದ್ದು, ಇಲ್ಲಿಯ ಯುವಕರು ಕೌಶಲ್ಯ ಆಧಾರಿತ ತರಬೇತಿಗಳನ್ನು, ಡಿಪ್ಲೋ ಮಾ ಪದವಿಗಳನ್ನು ಪಡೆದರೆ ಜಾಗತಿಕ ಮಟ್ಟದಲ್ಲಿ ಮನ್ನಣೆ ಇರುವ ಕಂಪನಿಗಳಲ್ಲಿ ವಿವಿಧ ಉನ್ನತ ಹುದ್ದೆಗಳನ್ನು ಪಡೆದು ಆರ್ಥಿ ಕವಾಗಿ ಮುಂದೆ ಬರಲು ಸಹಾಯ ಕವಾಗ ಬಲ್ಲದು ಎಂದರು. ವಿದ್ಯಾರ್ಥಿಗಳು ಓದಿನ ಜೊತೆ ಹೊಸ ಹೊಸ ತಾಂತ್ರಿಕ ಕೌಶಲ್ಯ ಗಳನ್ನು ಕಲಿಯಬೇಕು, ಅಂತಹ ಹೊಸ ತಾಂತ್ರಿಕ ಕೌಶಲ್ಯಗಳನ್ನು ಸರಕಾರಿ ಸಂಸ್ಥೆ ಜಿಟಿಟಿಸಿ ಕಲಿಸುತ್ತಿದೆ ಎಂದು ಹೇಳಿದರು.

ಕೌಶಲ್ಯ ಕಲಿಕಾ ಕೇಂದ್ರವಾಗಿ 50 ವರ್ಷದ ಅನುಭವ ಜಿ.ಟಿ.ಟಿ.ಸಿ ಗೆ ಇದೆ. ದೇಶದ ಮತ್ತು ವಿದೇಶದ ಅತ್ಯುನ್ನತ ಕೈಗಾರಿಕೆಗಳಿಗೆ ಕೌಶಲ್ಯ ಭರಿತ ಮಾನವ ಸಂಪನ್ಮೂಲ ನೀಡುತ್ತಾ ಬಂದಿದೆ. ಇಲ್ಲಿ ಕಲಿತ ಎಷ್ಟೋ ವಿದ್ಯಾರ್ಥಿಗಳು ವಿದೇಶ ದಲ್ಲೂ ಕೆಲಸ ಮಾಡುತ್ತಿರುವ ನಿದರ್ಶನ ಗಳಿವೆ. ಅಷ್ಟೇ ಅಲ್ಲ, ದೇಶದ ಹಲವೆಡೆ ಮತ್ತು ಹುಬ್ಬಳ್ಳಿ ಧಾರವಾಡದಲ್ಲೂ ಈ ವಿದ್ಯಾರ್ಥಿ ಗಳು ತಮ್ಮ ಸ್ವಂತ ಕೈಗಾರಿಕೆಗಳನ್ನು ಆರಂಭಿಸಿ ಹಲವಾರು ಜನರಿಗೆ ಉದ್ಯೋ ಗಗಳನ್ನು ಸೃಷ್ಟಿಸಿದ ಉದಾಹರಣೆಗಳಿವೆ. ಮುಂದಿನ ವರ್ಷಗಳಲ್ಲಿ ಕೌಶಲ್ಯವಿರುವ ವಿದ್ಯಾರ್ಥಿ ಗಳಿಗೆ ಇನ್ನೂ ಹೆಚ್ಚಿನ ಬೇಡಿಕೆ ಬರಲಿದೆ. ತಾಂತ್ರಿಕ ಬದಲಾವಣೆಗಳು, ಕೈಗಾರಿಕಾ ಮತ್ತು ಸೇವಾ ವಿಭಾಗಗಳಲ್ಲಿ ಹೊಸ ಬದ ಲಾವಣೆಯ ಬಿರುಗಾಳಿಯನ್ನೇ ಎಬ್ಬಿಸಲಿವೆ. ಕೌಶಲ್ಯ (ಸ್ಕಿಲ್), ಮರು ಕೌಶ ಲ್ಯ (ರಿಸ್ಕಿಲ್) ಹೆಚ್ಚಿನ ಕೌಶಲ್ಯ (ಆಪ್ ಸ್ಕಿಲ್) ಬಹುವಿಧ ಕೌಶಲ್ಯ (ಮಲ್ಟಿ ಸ್ಕಿಲ್) ಇವುಗಳಿಗೆ ಹೆಚ್ಚಿನ ಆದ್ಯತೆ ಸಿಗಲಿದೆ. ಇವೆಲ್ಲ ತರಬೇತಿಗಳಿಗೆ ಜಿಟಿಟಿಸಿಯಲ್ಲಿ ಅವಕಾ ಶಗಳಿದ್ದು ಯುವಜನತೆ ಆಸಕ್ತಿಯಿಂದ ಇವುಗಳಲ್ಲಿ ಭಾಗವಹಿಸಿ ತಮ್ಮ ಜೀವನ ವನ್ನು ರೂಪಿಸಿಕೊಳ್ಳಬೇಕು ಎಂದು ಹೇಳಿದರು.

ಇದೇ ಸಪ್ಟಂಬರ್ 2026ರಲ್ಲಿ ಚೈನಾ ದೇಶದ ಶಾಂಘೈನಲ್ಲಿ ನಡೆಯುತ್ತಿರುವ ಜಾಗತಿಕ ಕೌಶಲ್ಯ ಸ್ಪರ್ಧೆಯಲ್ಲಿ ಭಾರತ ವನ್ನು ಪ್ರತಿನಿಧಿಸಲು ಜಿಟಿಟಿಸಿ ಧಾರವಾಡ ಕೇಂದ್ರದ ಇಬ್ಬರು ವಿದ್ಯಾರ್ಥಿಗಳು ಆಯ್ಕೆ ಆಗಿದ್ದು, ವಿದ್ಯಾರ್ಥಿಗಳನ್ನು ಹಾಗೂ ಕೇಂದ್ರದ ಸಿಬ್ಬಂದಿ ವರ್ಗವನ್ನು ತುಂಬು ಹೃದಯದಿಂದ ಅಭಿನಂದಿಸಿದರು.

ಪ್ರತಿಸಲವೂ ಧಾರವಾಡ ಕೇಂದ್ರದಿಂದ ಇಂತಹ ಜಾಗತಿಕ ಸ್ಪರ್ಧೆಗೆ ವಿದ್ಯಾರ್ಥಿಗಳು ಆಯ್ಕೆಯಾಗಿ ಭಾರತಕ್ಕೆ ಹಾಗೂ ಜಿಲ್ಲೆಗೆ ಗೌರವ ತರುತ್ತಿರುವ ಈ ಸಂಸ್ಥೆಗೆ ಹೆಚ್ಚಿನ ಸಂಖ್ಯೆಯಲ್ಲಿ ಪಾಲಕರು ತಮ್ಮ ಮಕ್ಕಳನ್ನು ಸೇರಿಸಬೇಕು ಮತ್ತು ನಮ್ಮ ಜಿಲ್ಲೆ ಕೌಶಲ್ಯ ತರಬೇತಿ ಹಾಗೂ ಸ್ಪರ್ಧೆಗಳಲ್ಲಿ ಇನ್ನೂ ಹೆಚ್ಚಿನ ಬಹುಮಾನ ಮತ್ತು ಪದಕಗಳನ್ನು ಗಳಿಸಿ ಜಿಲ್ಲೆಯ ಕೀರ್ತಿಯನ್ನು ಹೆಚ್ಚಿಸಬೇಕು ಎಂದು ಆಶಿಸಿದರು.

ಜಿಟಿಟಿಸಿ ಧಾರವಾಡ ಕೇಂದ್ರದ ಸಿದ್ದಾರೂಡ ಕನಿಹಾಳ ಅವರು ಮೆಕ್ಯಾನಿ ಕಲ್ ಇಂಜಿನಿಯರಿಂಗ ಹಾಗೂ ಚರಣ ಅವರು ಸಿಎನ್ಸಿ ಮಿಲ್ಲಿಂಗ್ ಟೆಕ್ನಾಲಜಿಯಲ್ಲಿ ರಾಜ್ಯ, ದಕ್ಷಿಣ ಭಾರತ ಮತ್ತು ಅಖಿಲ ಭಾರತ ಕೌಶಲ್ಯ ಸ್ಪರ್ಧೆಗಳಲ್ಲಿ ಚಿನ್ನದ ಪದಕಗಳನ್ನು ಗಳಿಸಿ ಈಗ ಅಂತರಾಷ್ಟ್ರೀಯ ಸ್ಪರ್ಧೆಯಲ್ಲಿ ಭಾರತವನ್ನು ಪ್ರತಿನಿಧಿಸುತ್ತಿರು ವುದು ಧಾರವಾಡ ಜಿಲ್ಲೆಗೆ ಮತ್ತು ಕರ್ನಾಟಕ ರಾಜ್ಯಕ್ಕೆ ಹೆಮ್ಮೆ ಎಂದು ಶ್ಲಾಘಿಸಿದರು.

ಕಾರ್ಯಕ್ರಮದಲ್ಲಿ ಕಾರ್ಪೊರೇಟ್ ಟ್ರೇನರ್ ಹಾಗೂ ಮೈಂಡ್ ವೇವ್ ಸಂಸ್ಥೆಯ ಮುಖ್ಯಸ್ಥರು ಮಹೇಶ್ ಮಾಶಾಳ ಅವರು ಹೊಸ ವಿದ್ಯಾರ್ಥಿಗಳನ್ನು ಮತ್ತು ಪಾಲಕರನ್ನು ಉದ್ದೇಶಿಸಿ ಪ್ರೇರಣಾದಾಯಕ ಮಾತುಗಳನ್ನು ಹೇಳಿದರು. ತಾಂತ್ರಿಕ ಜಗತ್ತು ಹೇಗೆ ಬದಲಾಗುತ್ತಿದೆ ಮತ್ತು ಇಂತಹ ಸ್ಥಿತಿಯಲ್ಲಿ ನಮ್ಮ ಕಲಿಕೆ, ನಮ್ಮ ವ್ಯಕ್ತಿತ್ವ, ಮತ್ತು ನಮ್ಮ ಪ್ರಯತ್ನಗಳು ಹೇಗಿರಬೇಕು ಎಂಬುದನ್ನು ಮನವರಿಕೆ ಮಾಡಿಕೊಟ್ಟರು.

ಕಾರ್ಯಕ್ರಮದಲ್ಲಿ ಪ್ರಾಂಶುಪಾಲ ಶಿವಾನಂದ ಕುಂಬಾರ ಅವರು ಅಧ್ಯಕ್ಷತೆ ವಹಿಸಿದ್ದರು. ತರಬೇತಿಗಳ ವಿಸ್ತøತ ಮಾಹಿತಿ ಯನ್ನು ಕೇಂದ್ರದ ಎಚ್ಓಡಿ ಬಸವರಾಜ ಬಿ ಅವರು ತಿಳಿಸಿದರು. ಕೌಶಲ್ಯ ತರಬೇತಿಗಳಿಗೆ ರಾಷ್ಟ್ರೀಯ ಮನ್ನಣೆ ಗಳಿಸಿರುವ ಶಂಕರ ಗೌಡ ಅವರು ಜಾಗತಿಕ ಸ್ಪರ್ಧೆಗಳಿಗೆ ನಮ್ಮ ವಿದ್ಯಾರ್ಥಿಗಳನ್ನು ಹೇಗೆ ಅಣಿಗೊಳಿಸುತ್ತೇವೆ ಮತ್ತು ತರಬೇತಿ ಕೊಡುತ್ತೇವೆ ಎಂಬುದನ್ನು ವಿವರಿಸಿದರು.

ಕಾರ್ಯಕ್ರಮದಲ್ಲಿ ಪ್ರಶಾಂತ ಸುತಾರ ಕಾರ್ಯಕ್ರಮವನ್ನು ನಿರೂಪಿಸಿದರು. ಜಿಟಿಟಿಸಿಯ ಎಲ್ಲಾ ಸಿಬ್ಬಂದಿ ವರ್ಗದವರು ಹಾಗೂ ವಿದ್ಯಾರ್ಥಿ, ವಿದ್ಯಾರ್ಥಿನಿಯರು ಭಾಗವಹಿಸಿದ್ದರು.

# ಎಲ್‌ಕೆಜಿ ತರಗತಿಗೆ ಚಾಲನೆ



**ಬೆಳಗಾವಿ ವಾರ್ತೆ ನವಲಗುಂದ:** ಸರಕಾರಿ ಶಾಲೆಗಳಲ್ಲಿ ಇಂದಿನ ಆಧುನಿಕ ದಿನಮಾನಗಳಿಗೆ ತಕ್ಕಂತೆ ಆರಂಭಿಕ ಶಿಕ್ಷಣ ನೀಡುವುದು ಅತ್ಯಗತ್ಯವಾಗಿದೆ. ಪಾಲಕರು ಇದರ ಸದುಪಯೋಗ ಪಡಿಸಿಕೊಂಡು ತಮ್ಮ ಮಕ್ಕಳನ್ನು ಸರಕಾರಿ ಶಾಲೆಗೆ ದಾಖಲಿಸಬೇಕು ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಅರ್ಜುನ ಕಂಬೋಗಿ ಕರೆ ನೀಡಿದರು.

ಪಟ್ಟಣದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ನಂ–3 ರಲ್ಲಿ ಪ್ರಸಕ್ತ ಸಾಲಿನ ಎಲ್.ಕೆ.ಜಿ ತರಗತಿಯನ್ನು ಅಧಿಕೃತವಾಗಿ ಚಾಲನೆ ನೀಡಿ ಮಾತನಾಡಿದ ಅವರು ಪಾಲಕರು ಯಾವುದೇ ಹಿಂಜರಿಕೆಯಿಲ್ಲದೆ ತಮ್ಮ ಮಕ್ಕಳನ್ನು ಸರಕಾರಿ ಶಾಲೆಗೆ ದಾಖಲಿಸಬೇಕು. ಶಾಲೆಯ ಸರ್ವಾಂಗೀಣ ಪ್ರಗತಿ ಹಾಗೂ ಸಬಲೀಕರಣಕ್ಕೆ ಶಿಕ್ಷಕರು, ಪಾಲಕರು ಮತ್ತು ಸಾರ್ವಜನಿಕರು ಒಟ್ಟಾಗಿ ಕೈಜೋಡಿಸಬೇಕೆಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಕ್ಷೇತ್ರ ಶಿಕ್ಷಣಾಧಿಕಾರಿ ಕಚೇರಿಯ ಪ್ರಾಥಮಿಕ ಶಿಕ್ಷಣ ಸಂಯೋಜಕ ಎಸ್.ಎಂ ಬೆಂಚಿಕೇರಿ ಮಾತನಾಡಿ ಸರ್ಕಾರಿ ಶಾಲೆಗಳಲ್ಲಿ ಎಲ್.ಕೆ.ಜಿ ತರಗತಿ ಆರಂಭಿಸಿರುವುದು ಬಡ ಹಾಗೂ ಮಧ್ಯಮ ವರ್ಗದ ಪಾಲಕರಿಗೆ ವರದಾನವಾಗಿದೆ, ಸಾರ್ವಜನಿಕರು ಮತ್ತು ಪಾಲಕರು ಸರ್ಕಾರಿ ಶಾಲೆಗಳ ಸಬಲೀಕರಣಕ್ಕೆ ಕೈಜೋಡಿಸಬೇಕು ಎಂದು ಆಶಯ ವ್ಯಕ್ತಪಡಿಸಿದರು.

ಸಿ.ಆರ್.ಪಿ ಶಿವಯೋಗಿ ಜಂಗಣ್ಣವರ ಮಾತನಾಡಿ ಸರಕಾರಿ ಶಾಲೆಯಲ್ಲಿ ಎಲ್.ಕೆ.ಜಿ ತರಗತಿ ಆರಂಭಿಸಿರುವುದು ಇಂದಿನ ಶಿಕ್ಷಣ ವ್ಯವಸ್ಥೆಯಲ್ಲಿ ಅತ್ಯಂತ ಮಹತ್ವದ ಹಾಗೂ ಕ್ರಾಂತಿಕಾರಕ ಹೆಜ್ಜೆಯಾಗಿದೆ, ಖಾಸಗಿ ಶಾಲೆಗಳ ಪೈಪೋಟಿಯ ನಡುವೆ ಬಡ ಮತ್ತು ಮಧ್ಯಮ ವರ್ಗದ ಮಕ್ಕಳಿಗೆ ಉಚಿತವಾಗಿ ಗುಣಮಟ್ಟದ ಆರಂಭಿಕ ಶಿಕ್ಷಣ ದೊರೆಯುವಂತಾಗಲು ಇದು ನೆರವಾಗುತ್ತದೆ ಎಂದರು.

ಈ ಸಂದರ್ಭದಲ್ಲಿ ಪ್ರಧಾನ ಗುರು ಮಾತೆ ಎಂ.ಸಿ ಚನ್ನಪ್ಪಗೌಡ್ರು, ಎಸ್.ಡಿ.ಎಂ.ಸಿ ಅಧ್ಯಕ್ಷ ಕಾಶೀಮಸಾಬ ಮಚಲಿಬಂದರ, ಮಾಜಿ ಅಧ್ಯಕ್ಷ ಅಡಿವೆಪ್ಪ ಶಿರಸಂಗಿ, ಸಾಮಾಜಿಕ ಕಾರ್ಯಕರ್ತ ಮಾಬುಸಾಬ ಯರಗುಪ್ಪಿ, ರೈತ ಮುಖಂಡ ಮಲ್ಲಿಕಾರ್ಜುನಸ್ವಾಮಿ ಮಠಪತಿ, ಬಶೀರಅಹ್ಮದ ಹುನಗುಂದ, ಶಿವಲಿಂಗಯ್ಯ ಹಿರೇಮಠ, ಬಸವರಾಜ ಮಲ್ಲದಾಸರ, ಸಹ ಶಿಕ್ಷಕರಾದ ಕೆ. ಕೆ ಮಂಕಣಿ, ಎಂ.ಎಚ್. ಚಿಕನಾಳ, ಆರ್.ಬಿ ಹಳ್ಳಿಕೇರಿ, ಸುರೇಶ ಭಜಂತ್ರಿ, ಕೆ.ಎಫ್ ಬಂತಿ, ಕುಮಾರಿ ಎಂ.ಎನ್ ವಗ್ಗರ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಸಚಿವ ಸ್ಥಾನಕ್ಕೆ ಆಗ್ರಹ



**ಬೆಳಗಾವಿ ವಾರ್ತೆ ಹುಬ್ಬಳ್ಳಿ:** ಶಾಸಕರಾದ ಪ್ರಸಾದ್ ಅಬ್ಬಯ್ಯ ಅವರಿಗೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಸಚಿವ ಸಂಪುಟದಲ್ಲಿ ಸಚಿವ ಸ್ಥಾನ ನೀಡಬೇಕೆಂದು ಆಗ್ರಹಿಸಿ ಹುಬ್ಬಳ್ಳಿ ತಾಲೂಕ ರೈತ ಸಂಘದಿಂದ ನಗರದಲ್ಲಿ ಪ್ರತಿಭಟನೆ ನಡೆಸಲಾಯಿತು.

ತಹಶಿಲ್ದಾರರ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದ ಪ್ರತಿಭಟನಾಕಾರರು, ಶಾಸಕರಾದ ಪ್ರಸಾದ್ ಅಬ್ಬಯ್ಯ ಅವರು ಸತತ ಮೂರು ಬಾರಿ ಶಾಸಕರಾಗಿ ಪೂರ್ವ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುತ್ತಿದ್ದು, ಕ್ಷೇತ್ರದಲ್ಲಿ ಅನೇಕ ಅಭಿವೃದ್ಧಿ ಕಾರ್ಯಗಳನ್ನು ಮಾಡಿದ್ದಾರೆ.

ಸಚಿವ ಸಂಪುಟದಲ್ಲಿ ಸಚಿವ ಸ್ಥಾನ ನೀಡಿದರೆ ಇನ್ನಷ್ಟು ಹೆಚ್ಚಿನ ಅಭಿವೃದ್ಧಿ ಕಾರ್ಯಗಳನ್ನು ಅಬ್ಬಯ್ಯ ಅವರು ಮಾಡಲಿದ್ದಾರೆ.ಈ ನಿಟ್ಟಿನಲ್ಲಿ ಅಬ್ಬಯ್ಯ ಅವರಿಗೆ ಸಚಿವ ಸ್ಥಾನ ನೀಡಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಹುಬ್ಬಳ್ಳಿ ತಾಲೂಕು ರೈತ ಸಂಘದ ಅಧ್ಯಕ್ಷರಾದ ಸಿದ್ದಪ್ಪ ಮೀಸೆ, ಉಪಾಧ್ಯಕ್ಷ ಫಕ್ಕೀರಗೌಡ ಪಾಟೀಲ್, ರೈತ ಮುಖಂಡರಾದ ಅಡಿವೆಪ್ಪ ನಂದಿಹಳ್ಳಿ, ಗುರಸಿದ್ದಪ್ಪ ಕಟಗಿ, ಚನ್ನಬಸಪ್ಪ ಅಸುಂಡಿ, ಮೋಹನ್ ಅಸುಂಡಿ, ವೀರಭದ್ರಪ್ಪ ಮೇಟಿ ಗಂಗಾಧರ ಅಸುಂಡಿ ಸೇರಿದಂತೆ ಇತರರು ಇದ್ದರು.

## ಸಹಕಾರ ಡಿಪ್ಲೋಮಾ ತರಬೇತಿಗೆ ಅರ್ಜಿ ಆಹ್ವಾನ

ಧಾರವಾಡ: ಜುಲೈ 01, 2026 ರಿಂದ ಪ್ರಾರಂಭವಾಗುವ ಸಹಕಾರ ಡಿಪ್ಲೋಮಾ ಇನ್ ಕೋ–ಆಪರೇಟಿವ್ ಮ್ಯಾನೇಜ್‌ಮೆಂಟ್ ತರಬೇತಿಗೆ ಅರ್ಜಿ ಆಹ್ವಾನಿಸಲಾಗಿದೆ. ವಿದ್ಯಾರ್ಹತೆ ಎಸ್.ಎಸ್.ಎಲ್.ಸಿ ಮೇಲ್ಪಟ್ಟವರಿಗೆ ಅವಕಾಶವಿದೆ. ತರಬೇತಿ ಅವಧಿ 6 ತಿಂಗಳುಗಳಾಗಿದ್ದು, ಪ್ರತಿ ಮಾಹೆಯಾನ ರೂ.500 ಶಿಷ್ಯವೇತನ ನಿಡಲಾಗುವುದು. ಹೆಚ್ಚಿನ ಮಾಹಿತಿಗಾಗಿ: 8317383188, 9845120371 ಸಂಪರ್ಕಿಸಬಹುದು ಎಂದು ಕರ್ನಾಟಕ ಇನ್‌ಸ್ಟಿಟ್ಯೂಟ್ ಆಫ್ ಕೋ–ಆಪರೇಟಿವ್ ಮ್ಯಾನೇಜಮೆಂಟ್‌ನ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಾಗರಿಕಸ್ನೇಹಿ ಆಡಳಿತಕ್ಕೆ ಆದ್ಯತೆ ನೀಡಿ

**ಬೆಳಗಾವಿ ವಾರ್ತೆ ಧಾರವಾಡ:** ಸಾರ್ವಜನಿಕರಿಗೆ ವಿವಿಧ ಇಲಾಖೆಗಳಲ್ಲಿರುವ ಯೋಜನೆಯ ಬಗ್ಗೆ ಮಾಹಿತಿ ಒದಗಿಸಬೇಕು. ಆ ಮೂಲಕ ನಾಗರಿಕಸ್ನೇಹಿ ಆಡಳಿತಕ್ಕೆ ಅಧಿಕಾರಿಗಳು ಆದ್ಯತೆ ನೀಡಬೇಕೆಂದು ಕೆಪಿಟಿಸಿಎಲ್ ವ್ಯವಸ್ಥಾಪಕ ನಿರ್ದೇಶಕರು ಹಾಗೂ ಧಾರವಾಡ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಾ. ರಾಮ್ ಪ್ರಸಾತ್ ಮನೋಹರ ವಿ. ಅವರು ಹೇಳಿದರು.

ಅವರುಬೆಳಿಗ್ಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ 2026 ನೇ ಸಾಲಿನ ಮುಂಗಾರು ಪರಿಸ್ಥಿತಿಯನ್ನು ಎದುರಿಸಲು ಧಾರವಾಡ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರವು ಕೈಗೊಳ್ಳಬೇಕಾದ ಪೂರ್ವ ಸಿದ್ಧತೆಯ ಕ್ರಮಗಳ ಕುರಿತು ಸಭೆ ಜರುಗಿಸಿ, ಮಾತನಾಡಿದರು.

ಮುಂಗಾರು ಹಂಗಾಮಿನಲ್ಲಿ ಬಿತ್ತನೆ ಬೀಜ ಹಾಗೂ ರಸಗೊಬ್ಬರ ವಿತರಣೆಯಲ್ಲಿ ಯಾವುದೇ ರೀತಿ ಕೊರತೆ ಆಗದಂತೆ ಅಧಿಕಾರಿಗಳು ಕ್ರಮಕೈಗೊಳ್ಳಲು ತಿಳಿಸಿದರು. ಎಲ್ಲ ರೈತರಿಗೆ ಕಡ್ಡಾಯವಾಗಿ ಫ್ರೂಟ್ಸ್ ಐಡಿ ತಂತ್ರಾಂಶದಲ್ಲಿ ನೋಂದಣಿ ಮಾಡಿಕೊಳ್ಳುವಂತೆ ಅಧಿಕಾರಿಗಳು ಕ್ರಮಕೈಗೊಳ್ಳಬೇಕು. ಹಾಗೂ ಯಾವುದೇ ರೈತರು ಫ್ರೂಟ್ಸ್ ಐಡಿ ನೋಂದಣಿ ಪ್ರಕ್ರಿಯೆಯಿಂದ ಹೊರಗುಳಿಯದಂತೆ ನೋಡಿಕೊಳ್ಳಬೇಕು. ಅಲ್ಲದೇ ರೈತರ ಪರಿಹಾರ ವಿತರಣೆಯಲ್ಲಿ ವಿಳಂಬವಾಗದಂತೆ ಕ್ರಮವಹಿಸಬೇಕು. ಫ್ರೂಟ್ಸ್ ಐಡಿ ನೋಂದಣಿ ಕುರಿತು ರೈತರಿಗೆ ಜಾಗೃತಿ ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು. ಯಾವುದೇ ರೀತಿಯ ತಾಂತ್ರಿಕ ಸಮಸ್ಯೆಗಳು ಕಂಡುಬಂದಲ್ಲಿ ಪರಿಹರಿಸಲು ಸೂಕ್ತ ಕ್ರಮಕೈಗೊಳ್ಳಬೇಕು. ನಮ್ಮ ಹೊಲ ನಮ್ಮ ದಾರಿ ಯೋಜನೆಯಡಿ ಹೊಲಗಳಿಗೆ ರಸ್ತೆ ನಿರ್ಮಾಣ ಮಾಡಬೇಕು. ಗ್ರಾಮೀಣ ಭಾಗದ ರಸ್ತೆ, ಸೇತುವೆ ಗುಣಮಟ್ಟವಾಗಿರುವ ಬಗ್ಗೆ ಗಮನಹರಿಸಿ. ಹಳೆಯ ಕಾಮಗಾರಿಗಳನ್ನು ಶೀಘ್ರದಲ್ಲಿ ಪೂರ್ಣಗೊಳಿಸಿ ಎಂದು ಕೃಷಿ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲೆಯಲ್ಲಿ 56,593 ಇ–ಪೌತಿ ಖಾತೆಗಳಿವೆ. ಅದರಲ್ಲಿ 12,519 ಬಾಕಿ ಇ–ಪೌತಿ ಖಾತೆಗಳಿವೆ. ಅವುಗಳನ್ನು ಪೂರ್ಣಗೊಳಿಸಲು ಕ್ರಮವಹಿಸಲಾಗಿದೆ. ಈ ಕುರಿತು ಹೆಚ್ಚಿನ ಗಮನಹರಿಸಬೇಕು. ಮರಣ ಹೊಂದಿದವರ ಕುರಿತು ಮಾಹಿತಿ ಪಡೆದುಕೊಂಡು, ಖಾತೆಗಳ ಬದಲಾವಣೆಗೆ ಮುಂದಿನ ಕ್ರಮಗಳನ್ನು ಕೈಗೊಳ್ಳಬೇಕು ಎಂದರು.

ಜಿಲ್ಲೆಯಲ್ಲಿರುವ ಕೆರೆಗಳ ಸ್ವಚ್ಛತೆಗೆ ಮುಂದಾಗಬೇಕು. ಉದ್ಯಾನವನದ ಅಭಿವೃದ್ಧಿಗೆ ಒತ್ತು ನೀಡಬೇಕಿದೆ. ಆರೋಗ್ಯ, ಕೃಷಿ, ತೋಟಗಾರಿಕೆ, ನಗರಾಭಿವೃದ್ಧಿ ಸೇರಿದಂತೆ ವಿವಿಧ ಇಲಾಖೆಗಳಲ್ಲಿರುವ ಸಮಸ್ಯೆಗಳನ್ನು ಪರಿಹರಿಸಿಕೊಳ್ಳಬೇಕು. ನಿರುದ್ಯೋಗ ಸಮಸ್ಯೆಗೆ ಉದ್ಯೋಗ ಅವಕಾಶಗಳನ್ನು ಸೃಷ್ಠಿ ಮಾಡಿಕೊಳ್ಳುವ ಮೂಲಕ ಸಮಸ್ಯೆ ಪರಿಹಾರಕ್ಕೆ ಕ್ರಮವಹಿಸಬೇಕು. ಕಸ ವಿಲೇವಾರಿ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಬೇಕು ಎಂದು ಹೇಳಿದರು.

ಧಾರವಾಡ ಜಿಲ್ಲೆಯ 08 ತಾಲೂಕುಗಳ ಪೈಕಿ ಕಲಘಟಗಿ ಹಾಗೂ ಅಳ್ನಾವರ ತಾಲ್ಲೂಕು ಮಲೆನಾಡು ಪ್ರದೇಶಗಳಾಗಿದ್ದು, ಧಾರವಾಡ ತಾಲೂಕಿನ ಭಾಗಶ: ಗ್ರಾಮಗಳು ಮಲೆನಾಡು ಹಾಗೂ ಬಯಲು ಸೀಮೆ ಪ್ರದೇಶಗಳಾಗಿವೆ. ಹುಬ್ಬಳ್ಳಿ, ನವಲಗುಂದ, ಕುಂದಗೋಳ ತಾಲೂಕುಗಳು ಬಯಲುಸೀಮೆ ಪ್ರದೇಶಗಳಾಗಿವೆ.

ಕುಂದಗೋಳ, ಹುಬ್ಬಳ್ಳಿ. ನವಲಗುಂದ ಧಾರವಾಡ ತಾಲೂಕಿನ ಬೆಣ್ಣಿಹಳ್ಳ ಹಾಗೂ ತುಪ್ಪರಿಹಳ್ಳಗಳು ದೊಡ್ಡ ಪ್ರಮಾಣದ ಹಳ್ಳಗಳಾಗಿದ್ದು. ಸದರಿ ಹಳ್ಳಗಳು ಮಳೆಗಾಲದಲ್ಲಿ ಅಚ್ಚು–ಕಟ್ಟು ಪ್ರದೇಶಗಳಲ್ಲಿ (ಬೆಣ್ಣೆ ಹಳ್ಳ–ಹಾವೇರಿ ಜಿಲ್ಲೆ ಶಿಗ್ಗಾಂವ ತಾಲ್ಲೂಕಿನ ದೊಂಡಸಿ) ತುಪ್ಪರಿ ಹಳ್ಳ–ಬೆಳಗಾವಿ ಜಿಲ್ಲೆ ಕಿತ್ತೂರು) ಭಾರಿ ಮಳೆಯಿಂದಾಗಿ ಹಳ್ಳಗಳು ಉಕ್ಕಿ ಹರಿದು ಪ್ರವಾಹ ಪರಿಸ್ಥಿತಿ ಉಂಟಾಗುತ್ತದೆ.

ಧಾರವಾಡ ಜಿಲ್ಲೆಯ ಬೆಣ್ಣಿ ಹಳ್ಳ ಮತ್ತು ತುಪ್ಪರಿ ಹಳ್ಳಗಳಿಂದ ಪ್ರವಾಹಕ್ಕೆ ಒಳಗಾಗಬಹುದಾದ ಗ್ರಾಮಗಳ ವಿವರ: ಕುಂದಗೋಳ ತಾಲೂಕಿನ 10 ಗ್ರಾಮಪಂಚಾಯತಿಗಳಲ್ಲಿ 17 ಗ್ರಾಮಗಳು ಪ್ರವಾಹಕ್ಕೆ ಒಳಪಡುತ್ತವೆ. 37093 ಜನಸಂಖ್ಯೆ, 16238 ಜಾನುವಾರು, 30442 ಎಕರೆ ಕೃಷಿ ಜಮೀನು ಹೊಂದಿದ್ದು, 397 ಜನ, 25 ಜಾನುವಾರು, 3544 ಎಕರೆ ಕೃಷಿ ಜಮೀನು ಪ್ರವಾಹಕ್ಕೆ ಒಳಗಾಗಬಹುದು. ಮುನ್ನಚ್ಚರಿಕಾ ಕ್ರಮವಾಗಿ 18 ಕಾಳಜಿ ಕೇಂದ್ರ ಹಾಗೂ 1 ಗೋಶಾಲೆಯನ್ನು ಗುರುತಿಸಲಾಗಿದೆ.

ಹುಬ್ಬಳ್ಳಿ ತಾಲೂಕಿನ 6 ಗ್ರಾಮಪಂಚಾಯತಿಗಳಲ್ಲಿ 7 ಗ್ರಾಮಗಳು ಪ್ರವಾಹಕ್ಕೆ ಒಳಪಡುತ್ತವೆ. 29038 ಜನಸಂಖ್ಯೆ, 7897 ಜಾನುವಾರು, 34188 ಎಕರೆ ಕೃಷಿ ಜಮೀನು ಹೊಂದಿದ್ದು, 2586 ಜನ, 275 ಜಾನುವಾರು, 17041 ಎಕರೆ ಕೃಷಿ ಜಮೀನು ಪ್ರವಾಹಕ್ಕೆ ಒಳಗಾಗಬಹುದು. ಮುನ್ನಚ್ಚರಿಕಾ ಕ್ರಮವಾಗಿ 14 ಕಾಳಜಿ ಕೇಂದ್ರ ಹಾಗೂ 1 ಗೋಶಾಲೆಯನ್ನು ಗುರುತಿಸಲಾಗಿದೆ.

ಅಣ್ಣಿಗೇರಿ ತಾಲೂಕಿನ 1 ಗ್ರಾಮಪಂಚಾಯತಿಯಲ್ಲಿ 1 ಗ್ರಾಮ ಪ್ರವಾಹಕ್ಕೆ ಒಳಪಡುತ್ತವೆ. 2372 ಜನಸಂಖ್ಯೆ, 384 ಜಾನುವಾರು, 1845 ಎಕರೆ ಕೃಷಿ ಜಮೀನು ಹೊಂದಿದ್ದು, 70 ಜನ, 45 ಜಾನುವಾರು, 243 ಎಕರೆ ಕೃಷಿ ಜಮೀನು ಪ್ರವಾಹಕ್ಕೆ ಒಳಗಾಗಬಹುದು. ಮುನ್ನಚ್ಚರಿಕಾ ಕ್ರಮವಾಗಿ 1 ಕಾಳಜಿ ಕೇಂದ್ರ ಹಾಗೂ 1 ಗೋಶಾಲೆಯನ್ನು ಗುರುತಿಸಲಾಗಿದೆ.

ನವಲಗುಂದ ತಾಲೂಕಿನ 15 ಗ್ರಾಮಪಂಚಾಯತಿಗಳಲ್ಲಿ 26 ಗ್ರಾಮಗಳು ಪ್ರವಾಹಕ್ಕೆ ಒಳಪಡುತ್ತವೆ. 130770 ಜನಸಂಖ್ಯೆ, 51864 ಜಾನುವಾರು, 1272221 ಎಕರೆ ಕೃಷಿ ಜಮೀನು ಹೊಂದಿದ್ದು, 5136 ಜನ, 2738 ಜಾನುವಾರು, 59324 ಎಕರೆ ಕೃಷಿ ಜಮೀನು ಪ್ರವಾಹಕ್ಕೆ ಒಳಗಾಗಬಹುದು. ಮುನ್ನಚ್ಚರಿಕಾ ಕ್ರಮವಾಗಿ 30 ಕಾಳಜಿ ಕೇಂದ್ರ ಹಾಗೂ 2 ಗೋಶಾಲೆಯನ್ನು ಗುರುತಿಸಲಾಗಿದೆ.

ಧಾರವಾಡ ತಾಲೂಕಿನ 3 ಗ್ರಾಮಪಂಚಾಯತಿಗಳಲ್ಲಿ 5 ಗ್ರಾಮಗಳು ಪ್ರವಾಹಕ್ಕೆ ಒಳಪಡುತ್ತವೆ. 26340 ಜನಸಂಖ್ಯೆ, 4056 ಜಾನುವಾರು, 14988 ಎಕರೆ ಕೃಷಿ ಜಮೀನು ಹೊಂದಿದ್ದು, 488 ಜನ, 105 ಜಾನುವಾರು, 5362 ಎಕರೆ ಕೃಷಿ ಜಮೀನು ಪ್ರವಾಹಕ್ಕೆ ಒಳಗಾಗಬಹುದು. ಮುನ್ನಚ್ಚರಿಕಾ ಕ್ರಮವಾಗಿ 8 ಕಾಳಜಿ ಕೇಂದ್ರ ಹಾಗೂ 1 ಗೋಶಾಲೆಯನ್ನು ಗುರುತಿಸಲಾಗಿದೆ.




ಧಾರವಾಡ ಜಿಲ್ಲೆಯ ಬೆಣ್ಣಿ ಹಳ್ಳ ಮತ್ತು ತುಪ್ಪರಿ ಹಳ್ಳಗಳಿಂದ ಒಟ್ಟಾರೆಯಾಗಿ 35 ಗ್ರಾಮ ಪಂಚಾಯತ್‌ಗಳ 56 ಗ್ರಾಮಗಳು ಪ್ರವಾಹಕ್ಕೆ ಒಳಡುತ್ತಿದ್ದು, 225613 ಜನಸಂಖ್ಯೆ, 80439 ಜಾನುವಾರುಗಳು, 208684 ಎಕರೆ ಕೃಷಿ ಜಮೀನು ಹೊಂದಿದ್ದು, 8677 ಜನಸಂಖ್ಯೆ, 3188 ಜಾನುವಾರುಗಳು, 85514 ಎಕರೆ ಕೃಷಿ ಜಮೀನು ಪ್ರವಾಹಕ್ಕೆ ಒಳಗಾಗಬಹುದು. ಮುನ್ನಚ್ಚರಿಕಾ ಕ್ರಮವಾಗಿ ಒಟ್ಟು 71 ಕಾಳಜಿ ಕೇಂದ್ರ ಹಾಗೂ 6 ಗೋಶಾಲೆಯನ್ನು ಗುರುತಿಸಲಾಗಿದೆ.

ತುರ್ತು ವಿಭಾಗದಲ್ಲಿ ಲಭ್ಯವಿರುವ ಸಲಕರಣೆಗಳು: ಲಿಫೆಬುವ್ಯ್–60, ಲೈಫ್ ಜಾಕೆಟ್–50, ಪೆಟ್ರೋಲ್ ಡ್ರೈವರ್ ಚೈನ್ ಸಾ–8, ನೈಲಾನ್ ರೋಪ್–8,ಎಲ್ಇಡಿ ಬೇಸ್ ಹ್ಯಾಂಡ್ ಸರ್ಚ್ ಲೈಟ್–8, ಬೋಲ್ಟ್ ಕಟರ್–6, ರೈನ್ ಕೋಟ್–153, ಬ್ಯಾಟರಿ ಆಪರೇಟರ್ ಲೈಟ್–1, ಇಂಪ್ಲಾಟೇಬಲ್ ಬೋಟ್ಸ್–4. ಓಬಿಎಮ್ ಮೋಟರ್ಸ್–4, ಪೋರ್ಟಬಲ್ ಪಂಪ್–8, ಆಸ್ಕ್ ಲೈಟ್–8 ಗಳು ಅಗ್ನಿಶಾಮಕ ಹಾಗೂ ತುರ್ತು ವಿಭಾಗದಲ್ಲಿ ಲಭ್ಯವಿರುತ್ತವೆ.

**ಮೇವು ದಾಸ್ತಾನು:** ಧಾರವಾಡ ಜಿಲ್ಲೆಯಲ್ಲಿ 2,33,464 ದನ ಮತ್ತು ಎಮ್ಮೆಗಳಿದ್ದು, 1,53,938 ಕುರಿ ಮತ್ತು ಮೇಕೆಗಳಿವೆ. ಧಾರವಾಡ ಜಿಲ್ಲೆಯಲ್ಲಿ ಪ್ರಸ್ತುತ ವಾರ 4,75,454.81 ಟನ್ ಮೇವು ಲಭ್ಯವಿದ್ದು, ಅದು ಮುಂದಿನ 45 ವಾರಗಳಿಗೆ ಆಗುವಷ್ಟು ಮೇವು ದಾಸ್ತಾನು ಲಭ್ಯವಿದೆ ಎಂದು ಅವರು ತಿಳಿಸಿದರು.

**22 ಗ್ರಾಮ 27 ಖಾಸಗಿ ಕೊಳವೆಬಾವಿ:** ಜಿಲ್ಲೆಯಲ್ಲಿ ಇಲ್ಲಿಯವರೆಗೆ ಧಾರವಾಡ, ಹುಬ್ಬಳ್ಳಿ ಮತ್ತು ಕಲಘಟಗಿ ತಾಲೂಕಿನ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗಿದ್ದು, ಖಾಸಗಿ ಕೊಳವೆ ಬಾವಿಗಳ ಮೂಲಕ ನೀರು ಸರಬರಾಜು ಮಾಡಲಾಗುತ್ತಿದೆ. ಧಾರವಾಡ ತಾಲೂಕಿನ ಹೊಸಟ್ಟಿ, ಮಂಡಿಹಾಳ, ಬೇಲೂರ, ಮುಗದ, ಮನಗುಂಡಿ, ಲೋಕೂರು, ನಿಗದಿ, ಬೊಗೂರು, ವೆಂಕಟಾಪೂರ, ಹೊಸ್ವಾಳ ಮತ್ತು ಹುಬ್ಬಳ್ಳಿ ತಾಲೂಕಿನ ನೂಲ್ವಿ, ಅದರಗುಂಚಿ, ಕುರ್ಡಿಕೇರೆ, ಛಬ್ಬಿ ಹಾಗೂ ಕಲಘಟಗಿ ತಾಲೂಕಿನ ನೆಲ್ಲಹರವಿ ತಾಂಡ, ಬಿ.ಹುಲಿಕಟ್ಟಿ, ದ್ಯಾಮನಕೊಂಡ, ಮುಕ್ಕಲ, ಹಿರೇ ಹುನಸಿಕಟ್ಟಿ, ಜುಂಜ ನಬೈಲ್, ಶಿಂಗನಹಳ್ಳಿ, ಬಮ್ಮಿಗಟ್ಟಿ, ಕಂದಲಿ ಗ್ರಾಮಗಳು ಸೇರಿದಂತೆ ಒಟ್ಟು 22 ಗ್ರಾಮ ಗಳಿಗೆ ಪ್ರಸ್ತುತ ಖಾಸಗಿ ಕೊಳವೆ ಬಾವಿ ಮೂಲಕ ನೀರು ಸರಬರಾಜು ಮಾಡಲಾ ಗುತ್ತಿದೆ ಎಂದು ಅವರು ತಿಳಿಸಿದರು.

**ನಗರ ಸ್ಥಳೀಯ ಸಂಸ್ಥೆಗಳು:** ಧಾರವಾಡ ಜಿಲ್ಲೆಯ 05 ಸ್ಥಳೀಯ ನಗರ ಸಂಸ್ಥೆಗಳಲ್ಲಿ 100 ವಾರ್ಡ್‌ಗಳಿದ್ದು, ಯಾವುದೇ ವಾರ್ಡ್‌ಗಳಲ್ಲಿ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಲಾ ಗುತ್ತಿಲ್ಲ. 80 ವಾರ್ಡ್‌ಗಳಲ್ಲಿ ಪ್ರತಿ ದಿನ ನೀರು ಪೂರೈಕೆ ಮಾಡಲಾಗುತ್ತಿದ್ದು, ಉಳಿದ 20 ವಾರ್ಡ್‌ಗಳಲ್ಲಿ 2 ರಿಂದ 3 ದಿನಗಳವರೆಗೆ ಕುಡಿಯುವ ನೀರು ಸರಬರಾಜು ಮಾಡಲಾಗುತ್ತಿದೆ. ಮತ್ತು 05 ಸ್ಥಳೀಯ ನಗರ ಸಂಸ್ಥೆಗಳಲ್ಲಿನ ಕೆರೆಗಳಲ್ಲಿ ಕುಡಿಯುವ ನೀರಿನ ಶೇಖರಣೆ ಸಾಕಷ್ಟು ಇರುವುದರಿಂದ ಪ್ರಸ್ತುತ ಬೇಸಿಗೆ ಅವಧಿಯಲ್ಲಿ ಯಾವುದೇ ಸಮಸ್ಯೆ ಉದ್ಭವಿಸುವುದಿಲ್ಲ ಎಂದು ಅಂದಾಜಿಸಲಾಗಿದೆ ಎಂದರು.

**ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆ:** ಹುಬ್ಬಳ್ಳಿ–ಧಾರವಾಡ ಮಹಾನಗರದ ವ್ಯಾಪ್ತಿಯಲ್ಲಿ 82 ವಾರ್ಡ್‌ಗಳಿದ್ದು, ಅದರಲ್ಲಿ 13 ವಾರ್ಡ್‌ಗಳಲ್ಲಿ 24ಘಿ7 ನೀರು ಪೂರೈಕೆ ಮಾಡಲಾಗುತ್ತಿದೆ. ಉಳಿದ ವಾರ್ಡ್‌ಗಳಲ್ಲಿ 2 ರಿಂದ 7 ದಿನಗಳವರೆಗೆ ಕುಡಿಯುವ ನೀರು ಸರಬರಾಜು ಮಾಡಲಾಗುತ್ತಿದೆ.

ಸಭೆಯಲ್ಲಿ ಜಿಲ್ಲಾಧಿಕಾರಿ ಸ್ನೇಹಲ್ ಆರ್., ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ, ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ., ಪ್ರೊಬೇಶನರಿ ಐಎಎಸ್ ಅಧಿಕಾರಿ ಅನುಪ್ರಿಯಾ ಸಾಕ್ಯಾ, ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆಯ ಆಯುಕ್ತ ಡಾ. ರುದ್ರೇಶ ಘಾಳಿ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಅಜೀಜ್ ದೇಸಾಯಿ, ಉಪವಿಭಾಗಾಧಿಕಾರಿ ಶಾಲಂ ಹುಸೇನ್, ಜಿಲ್ಲಾ ಪಂಚಾಯತ ಉಪಕಾರ್ಯದರ್ಶಿ ಮಲ್ಲಿಕಾರ್ಜುನ ತೊದಲಬಾಗಿ, ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಮಂಜುನಾಥ ಅಂತರವಳ್ಳಿ, ತೋಟಗಾರಿಕೆ ಇಲಾಖೆಯ ಜಂಟಿ ನಿರ್ದೇಶಕ ಕೆ.ಸಿ.ಭದ್ರಣ್ಣವರ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

# ಬೆಳಗಾವಿ ಅವಿಭಾಜ್ಯ ಅಂಗ ಠರಾವ್: ಪಾಲಿಕೆ ಆಯುಕ್ತರಿಗೆ ಪ್ರಾದೇಶಿಕ ಆಯುಕ್ತರ ಪತ್ರ




**ಬೆಳಗಾವಿ ವಾರ್ತೆ ಬೆಳಗಾವಿ:** ಬೆಳಗಾವಿ ಮಹಾನಗರ ಪಾಲಿಕೆಯಲ್ಲಿ 'ಬೆಳಗಾವಿ ಕರ್ನಾಟಕದ ಅವಿಭಾಜ್ಯ ಅಂಗ' ಎಂಬ ಗೊತ್ತುವಳಿ ಯನ್ನು ಅಂಗೀಕರಿಸುವ ಕುರಿತು ಅಗತ್ಯ ಕ್ರಮ ಕೈಗೊಳ್ಳುವಂತೆ ಪ್ರಾದೇಶಿಕ ಆಯುಕ್ತರು ಮಹಾನಗರ ಪಾಲಿಕೆ ಆಯುಕ್ತರಿಗೆ ಪತ್ರ ಬರೆದಿದ್ದಾರೆ.

ಕಳೆದ ದಿ. 8 ರಂದು ಈ ಪತ್ರವು ಪಾಲಿಕೆ ಆಯುಕ್ತರಿಗೆ ರವಾನೆಯಾಗಿದೆ.

ಪತ್ರದಲ್ಲಿ, ಬೆಳಗಾವಿ ಮಹಾನಗರ ಪಾಲಿಕೆಯಲ್ಲಿ ಕರ್ನಾಟಕ ಪರವಾದ ಗೊತ್ತುವಳಿ ಅಂಗೀಕರಿಸಲು ಬೆಳಗಾವಿ ಮಹಾನಗರ ಪಾಲಿಕೆಗೆ ನಿರ್ದೇಶನ ನೀಡುವಂತೆ ಕೋರಿ ಗಡಿನಾಡು ಕನ್ನಡಿಗರ ಸೇನೆ ಹಾಗೂ ಕರ್ನಾಟಕ ರಕ್ಷಣಾ ವೇದಿಕೆಯು ಸಲ್ಲಿಸಿದ ಮನವಿಗಳನ್ನು ಉಲ್ಲೇಖಿಸಿ ಈ ಪತ್ರ ರವಾನಿಸಲಾಗಿದೆ.

ಗಡಿನಾಡು ಕನ್ನಡಿಗರ ಸೇನೆಯ ರಾಜಾಧ್ಯಕ್ಷ ಬಲರಾಮ ಮಾಸೇನಟ್ಟಿ ಅವರು ಜೂನ್ 2ರಂದು ಹಾಗೂ ಕರ್ನಾಟಕ ರಕ್ಷಣಾ ವೇದಿಕೆಯ ಜಿಲ್ಲಾಧ್ಯಕ್ಷ ವಾಜೀದ ಅಲಿ ಹಿರೇಕೊಡಿ ಅವರು ಜೂನ್ 3 ರಂದು ಸಲ್ಲಿಸಿದ ಮನವಿಗಳ ಆಧಾರದ ಮೇಲೆ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿದೆ.

ಪತ್ರದಲ್ಲಿ, ಬೆಳಗಾವಿ ಮಹಾನಗರ ಪಾಲಿಕೆಯಲ್ಲಿ ಕರ್ನಾಟಕ ಪರವಾದ ಗೊತ್ತುವಳಿ ಸ್ವೀಕರಿಸುವ ಅಗತ್ಯವಿದೆ ಎಂದು ಮನವಿದಾರರು ಒತ್ತಾಯಿಸಿರುವುದನ್ನು ದಾಖಲಿಸಲಾಗಿದೆ. ಈ ಹಿನ್ನೆಲೆಯಲ್ಲಿ, ಮನವಿಗಳಲ್ಲಿನ ಅಂಶಗಳನ್ನು ಪರಿಶೀಲಿಸಿ, ನಿಯಮಾನುಸಾರ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಪಾಲಿಕೆ ಆಯುಕ್ತರಿಗೆ ತಿಳಿಸಲಾಗಿದೆ.

ಅಲ್ಲದೆ, ಕೈಗೊಂಡ ಕ್ರಮದ ಬಗ್ಗೆ ಪ್ರಾದೇಶಿಕ ಆಯುಕ್ತರ ಕಚೇರಿಗೆ ವರದಿ ಸಲ್ಲಿಸುವಂತೆಯೂ ಸೂಚನೆ ನೀಡಲಾಗಿದೆ. ಗಡಿನಾಡು, ಕನ್ನಡಿಗರ ಭಾವನೆ ಹಾಗೂ ರಾಜ್ಯದ ಹಿತಾಸಕ್ತಿಗೆ ಸಂಬಂಧಿಸಿದ ವಿಷಯವಾಗಿರುವುದರಿಂದ ಪಾಲಿಕೆ ಮುಂದಿನ ಕ್ರಮದತ್ತ ಎಲ್ಲರ ಗಮನ ನೆಟ್ಟಿದೆ.

# ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಜಿಲ್ಲಾಧಿಕಾರಿ ಭೇಟಿ



**ಬೆಳಗಾವಿ ವಾರ್ತೆ ನವಲಗುಂದ:** ಆಸ್ಪತ್ರೆಗೆ ಬರುವಂತಹ ರೋಗಿಗಳಿಗೆ ಉತ್ತಮ ಚಿಕಿತ್ಸೆ ನೀಡುವುದರ ಜೊತೆಗೆ ಆಸ್ಪತ್ರೆಯು ಒಳಗೆ ಮತ್ತು ಹೊರಗೆ ಸ್ವಚ್ಛವಾಗಿಟ್ಟುಕೊಳ್ಳುವಂತೆ ಜಿಲ್ಲಾಧಿಕಾರಿ ಸ್ನೇಹಲ್ ಆರ್ ಅವರು ಸೂಚಿಸಿದರು.

ಬುಧವಾರ ತಾಲ್ಲೂಕಿನ ಮೊರಬ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಅವರು ಆಸ್ಪತ್ರೆಯನ್ನು ಸದಾ ಸ್ವಚ್ಛತೆಯಿಂದ ಇಟ್ಟುಕೊಳ್ಳಬೇಕು ಎಂದು ಎಚ್ಚರಿಸಿದರು. ಕಾಲಾವಧಿ ಮುಗಿದಿರುವ ಯಾವುದೇ ಔಷಧಗಳನ್ನು ಇಟ್ಟುಕೊಳ್ಳಬೇಡಿ. ಅದರ ಬಗ್ಗೆ ಮುತುವರ್ಜಿ ವಹಿಸುವಂತೆ ತಿಳಿಸಿದರು.

ಆಸ್ಪತ್ರೆಯ ಆವರಣದಲ್ಲಿ ಬೀದಿ ನಾಯಿಗಳ ಹಾವಳಿ ಹೆಚ್ಚಾಗಿರುವುದನ್ನು ಕಂಡು ಆಸ್ಪತ್ರೆಯ ಒಳಗಡೆ ಅವುಗಳು ಬರದಂತೆ ನೋಡಿಕೊಳ್ಳಲು ಆಸ್ಪತ್ರೆಯ ಸಿಬ್ಬಂದಿಗಳಿಗೆ ನಿರ್ದೇಶನ ನೀಡಿದರು. ಆಸ್ಪತ್ರೆಗೆ ಬರುವಂತಹ ರೋಗಿಗಳಿಗೆ ಆತ್ಮಸ್ಥೈರ್ಯ ತುಂಬಬೇಕು ಅವರಿಗೆ ಆರೋಗ್ಯದ ಬಗ್ಗೆ ಯಾವ ರೀತಿ ಕಾಳಜಿವಹಿಸಬೇಕು ಎಂಬುದರ ಬಗ್ಗೆ ಮಾರ್ಗದರ್ಶನ ಮಾಡಬೇಕು ಎಂದರು.

ರೋಗಿಗಳಿಗೆ ಹೆಚ್ಚಿನ ಚಿಕಿತ್ಸೆ ಅಗತ್ಯವಿದ್ದರೆ ತಾಲ್ಲೂಕು ಅಥವಾ ಜಿಲ್ಲಾ ಮಟ್ಟದ ಆಸ್ಪತ್ರೆಗಳಿಗೆ ಭೇಟಿ ನೀಡಿ ಚಿಕಿತ್ಸೆ ಪಡೆದುಕೊಳ್ಳುವಂತೆ ತಿಳಿಸಬೇಕು ಎಂದು ಅವರು ಹೇಳಿದರು.

ಗ್ರಾಮದಲ್ಲಿ ಇರುವ ರೈತ ಸಂಪರ್ಕ ಕೇಂದ್ರ ಹಾಗೂ ನಾಡಕಛೇರಿ ಭೇಟಿ ನೀಡಿ ಪರಿಶೀಲಿಸಿದ ಅವರು ನಿಗದಿತ ಅವಧಿಯಲ್ಲಿ ಅರ್ಜಿಗಳು ವಿಲೇವಾರಿಯಾಗಬೇಕು. ಸಾರ್ವಜನಿಕರಿಗೆ ಸರಿಯಾದ ಮಾಹಿತಿ ನೀಡಿ ಕಚೇರಿಗಳಿಗೆ ಅನಿವಾರ್ಯ ಅಲೆದಾಟವನ್ನು ತಪ್ಪಿಸಿ ಎಂದರು.

ಪ್ರೊಬೆಷನರಿ ಐಎಎಸ್ ಅಧಿಕಾರಿ ಅನುಪಮಾ, ತಹಶೀಲ್ದಾರ್ ಸುಧೀರ್ ಸಾಹುಕಾರ್, ಡಾ ಮಿತುನ್ ಜೋಶಿ, ಇಒ ರವೀಂದ್ರಗೌಡ ಪಾಟೀಲ್, ಉಪತಹಶೀಲ್ದಾರ್ ಎಂ ಎಚ್ ಸದಾರಭಾಯಿ ಸೇರಿದಂತೆ ತಾಲ್ಲೂಕಿನ ವಿವಿಧ ಇಲಾಖೆ ಅಧಿಕಾರಿಗಳು ಇದ್ದರು.

## ಪಟಾಕಿ ಮಾರಾಟ ಅಂಗಡಿ ಸ್ಥಾಪನೆ : ಆಕ್ಷೇಪಣೆ ಇದ್ದಲ್ಲಿ ಸಲ್ಲಿಕೆ

**ಬೆಳಗಾವಿ ವಾರ್ತೆ ಬಾಗಲಕೋಟೆ:** ಬಾಗಲಕೋಟೆ ತಾಲೂಕಿನ ನೀರಲಕೇರಿ ಗ್ರಾಮದ ವಾಲಿ & ಸನ್ಸ್ ಫೈರ್ ವರ್ಕ್ಸ ಡೀಲರ್ ಇವರು ನೀರಲಕೇರಿ ಗ್ರಾಮದ ರಿ.ಸ.ನಂ.162/1ರಲ್ಲಿ ಪಟಾಕಿ ಮಾರಾಟ ಅಂಗಡಿ 1, 2, 2 & ಗೋದಾಮು 1, 2, 3 ಸ್ಥಾಪಿಸಲು ನಿರಾಪೇಕ್ಷಣಾ ಪತ್ರ ನೀಡುವಂತೆ ಕೋರಿ ಅರ್ಜಿ ಸಲ್ಲಿಸಿರುತ್ತಾರೆ.

ಸದರಿ ವಿಷಯಕ್ಕೆ ಸಂಬಂಧಿಸಿದಂತೆ, ಸಾರ್ವಜನಿಕರಿಂದ ಯಾವುದಾದರೂ ಆಕ್ಷೇಪಣೆಗಳು ಇದ್ದಲ್ಲಿ ಜುಲೈ 10 ರೊಳಗಾಗಿ ಜಿಲ್ಲಾಧಿಕಾರಿಗಳ ಕಚೇರಿ, ಬಾಗಲಕೋಟೆಗೆ ಲಿಖಿತ ರೂಪದಲ್ಲಿ ದಾಖಲೆಗಳೊಂದಿಗೆ ಸಲ್ಲಿಸುವಂತೆ ಅಪರ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬೆಟಗೇರಿ ಪ್ರೌಢ ಶಾಲೆಯ ವಿದ್ಯಾರ್ಥಿಗಳ ಅಮೋಘ ಸಾಧನೆ.!

## ಈ ಬಾರಿ ಬಾಲಕಿಯರದು ಮೇಲುಗೈ । ಸ್ಥಳೀಯ ಶಿಕ್ಷಣಪ್ರೇಮಿಗಳಿಂದ ಮೆಚ್ಚುಗೆ

**ವರದಿ: ಅಡಿವೇಶ ಮುಧೋಳ.**



**ಬೆಳಗಾವಿ ವಾರ್ತೆ ಬೆಟಗೇರಿ:** ಕೇಂದ್ರ ಸರಕಾರವು ನೀಡುವ ವಿದ್ಯಾರ್ಥಿ ವೇತನದ ಎನ್‌ಎಮ್‌ಎಮ್‌ಎಸ್ ಪರೀಕ್ಷೆಯಲ್ಲಿ ಗೋಕಾಕ ತಾಲೂಕಿನ ಬೆಟಗೇರಿ ವಿವಿಡಿ ಸರಕಾರಿ ಪ್ರೌಢ ಶಾಲೆಯ 6 ಜನ ವಿದ್ಯಾರ್ಥಿಗಳು ಉತ್ತಮ ಅಂಕ ಪಡೆದು ಉತ್ತೀರ್ಣರಾಗಿ ಶಿಷ್ಯವೇತನ ಪಡೆಯಲು ಅರ್ಹತೆಗೆ ಪಾತ್ರರಾಗಿದ್ದಾರೆ.

ಸನ್ 2025-26ನೇ ಸಾಲಿನಲ್ಲಿ ನಡೆದ ಎನ್‌ಎಮ್‌ಎಮ್‌ಎಸ್ ಪರೀಕ್ಷೆಯಲ್ಲಿ ಸ್ಥಳೀಯ ವಿವಿಡಿ ಸರಕಾರಿ ಪ್ರೌಢ ಶಾಲೆಯ ವಿದ್ಯಾರ್ಥಿಗಳಾದ ಸ್ವಾತಿ ಪಾಟೀಲ(107)ಅಂಕ, ಮಹಾದೇವಿ ಕೋಣಿ(102)ಅಂಕ, ಪಲ್ಲವಿ ಪಾಟೀಲ(101)ಅಂಕ, ಅನುಶ್ರೀ ಐದುಡ್ಡಿ(89) ಅಂಕ, ಶಾಜಿಯಾ ಮಿರ್ಜಾನಾಯ್ಕ (86)ಅಂಕ, ಕಾವೇರಿ ಯರಕನ್ನವರ(84)ಅಂಕ ಪಡೆದು ಉತ್ತೀರ್ಣರಾಗಿ ಶಿಷ್ಯವೇತನ ಪಡೆಯಲು ಅರ್ಹತೆ ಪಡೆದುಕೊಂಡಿದ್ದಾರೆ. ಈ ಬಾರಿ ಶಾಲೆಯ 6 ಜನ ವಿದ್ಯಾರ್ಥಿನಿಯರು ಮೇಲುಗೈ ಸಾಧಿಸಿದ್ದಾರೆ.

ಪ್ರತಿ ವರ್ಷಕ್ಕೊಮ್ಮೆ ಸರ್ಕಾರಿ ಮತ್ತು ಅನುದಾನಿತ ಪ್ರೌಢ ಶಾಲೆಯ 8 ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ಆರ್ಥಿಕವಾಗಿ ಹಿಂದುಳಿದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಶಿಷ್ಯವೇತನ ನೀಡಲು ನಡೆಸುವ ಸನ್ 2023-24ನೇ ಸಾಲಿನಲ್ಲಿ ನಡೆದ ನ್ಯಾಷನಲ್ ಮೀನ್ಸ್ ಕಮ್ ಮೆರಿಟ್ ಸ್ಕಾಲರ್ಶಿಪ್ ಎಕ್ಸಾಮ್‌ನಲ್ಲಿ ಬೆಟಗೇರಿ ವಿವಿಡಿ ಸರಕಾರಿ ಪ್ರೌಢ ಶಾಲೆಯ 21 ಜನ ವಿದ್ಯಾರ್ಥಿಗಳು ಪಾಸಾಗಿ ಶಿಷ್ಯ ವೇತನಕ್ಕೆ ಅರ್ಹರಾಗಿ ರಾಷ್ಟ್ರ ಮಟ್ಟದಲ್ಲಿ ಗಮನ ಸೆಳೆದಿದ್ದು ಇತಿಹಾಸದ ಸಂಗತಿ.

**ಬಡ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸಂಜೀವಿನಿ:** ಎನ್‌ಎಮ್‌ಎಮ್‌ಎಸ್ ಪರೀಕ್ಷೆಯಲ್ಲಿ ಪಾಸಾದ ವಿದ್ಯಾರ್ಥಿಗಳಿಗೆ ಕೇಂದ್ರ ಸರಕಾರ ಈ ವಿದ್ಯಾರ್ಥಿ ವೇತನವನ್ನು ನೀಡುತ್ತದೆ. ಅರ್ಹತೆ ಪಡೆದ ವಿದ್ಯಾರ್ಥಿಗೆ 8 ನೇ ತರಗತಿಯಿಂದ ಪಿಯುಸಿ ದ್ವಿತೀಯ ವರ್ಷದ ತನಕ ಒಟ್ಟು ಸುಮಾರು 6 ಲಕ್ಷ ರೂಪಾಯಿವರೆಗೆ ಶಿಷ್ಯ ವೇತನ ನೀಡುತ್ತದೆ. ಬಡ ಪ್ರತಿಭಾವಂತ ವಿದ್ಯಾರ್ಥಿಗಳ ಆರ್ಥಿಕ ಸಬಲತೆಗೆ ಕೇಂದ್ರ ಸರಕಾರ ಸಹಾಯ ಮಾಡುತ್ತಿದೆ. ಹೀಗಾಗಿ ಬಡ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸಂಜೀವಿನಿಯಾಗಿದೆ ಈ ಶಿಷ್ಯ ವೇತನ.

ಈ ಪರೀಕ್ಷೆ ಹೈಸ್ಕೂಲ್ ಮಕ್ಕಳಿಗೆ ಮಿನಿ ಐಎಎಸ್ ಮತ್ತು ಕೆಎಎಸ್ ಪರೀಕ್ಷೆವಿದ್ದಂತೆ. ಪ್ರತಿ ವರ್ಷ ನಮ್ಮ ಶಾಲೆಯ ಹಲವಾರು ಜನ ವಿದ್ಯಾರ್ಥಿಗಳು ಈ ಪರೀಕ್ಷೆಯಲ್ಲಿ ಉತ್ತೀರ್ಣರಾಗಿ ಶಿಷ್ಯವೇತನ ಪಡೆಯಲು ಅರ್ಹರಾಗುತ್ತಿರುವದು ಹೆಮ್ಮೆಯ ಸಂಗತಿಯಾಗಿದೆ ಎಂದು ಬೆಟಗೇರಿ ವಿವಿಡಿ ಸರ್ಕಾರಿ ಪ್ರೌಢ ಶಾಲೆಯ ಮುಖ್ಯೋಪಾಧ್ಯಯ ರಮೇಶ ಅಳಗುಂಡಿ ತಿಳಿಸಿದ್ದಾರೆ.

ಬೆಟಗೇರಿ ವಿವಿಡಿ ಸರಕಾರಿ ಪ್ರೌಢ ಶಾಲೆಯ 8 ನೇ ತರಗತಿಯ ಹಲವಾರು ಜನ ವಿದ್ಯಾರ್ಥಿಗಳು ನ್ಯಾಷನಲ್ ಮೀನ್ಸ್ ಕಮ್ ಮೆರಿಟ್ ಸ್ಕಾಲರ್ಶಿಪ್ ಎಕ್ಸಾಮ್‌ನಲ್ಲಿ ಪ್ರತಿ ವರ್ಷ ಉತ್ತೀರ್ಣರಾಗಿ ಶಿಷ್ಯವೇತನ ಪಡೆಯಲು ಅರ್ಹರಾಗುತ್ತಿರುವ ಸಂಗತಿಯು ಸ್ಥಳೀಯ ವಿವಿಡಿ ಸರ್ಕಾರಿ ಪ್ರೌಢ ಶಾಲೆಯು ಹಾಗೂ ಬೆಟಗೇರಿ ಗ್ರಾಮದ ಘನತೆ ಮತ್ತು ಗೌರವ ಹೆಚ್ಚಿಸಿದೆ.

ಇಲ್ಲಿಯ ವಿವಿಡಿ ಸರಕಾರಿ ಪ್ರೌಢ ಶಾಲೆಯ 8ನೇ ತರಗತಿ ವಿದ್ಯಾರ್ಥಿಗಳು ಎನ್‌ಎಮ್‌ಎಮ್‌ಎಸ್ ಪರೀಕ್ಷೆಯಲ್ಲಿ ಉತ್ತೀರ್ಣರಾಗಿ ಶಿಷ್ಯ ವೇತನ ಪಡೆಯಲು ಅರ್ಹರಾದ ವಿದ್ಯಾರ್ಥಿಗಳ ಸಾಧನೆಗೆ ಹಾಗೂ ಪರೀಕ್ಷೆಯಲ್ಲಿ ಪಾಸಾಗುವಂತೆ ಮಾರ್ಗದರ್ಶನ ನೀಡಿದ ಶಾಲೆಯ ಗುರು ಬಳಗಕ್ಕೆ ಶಾಲೆಯ ಎಸ್‌ಡಿಎಮ್‌ಸಿ ಅಧ್ಯಕ್ಷ ರಾಮಣ್ಣ ನೀಲಣ್ಣವರ ಹಾಗೂ ಸದಸ್ಯರು, ಸ್ಥಳೀಯ ಶಿಕ್ಷಣ ಪ್ರೇಮಿಗಳು ಮೆಚ್ಚುಗೆ ವ್ಯಕ್ತಪಡಿಸಿ ಸಾಧನೆ ಶ್ಲಾಘಿಸಿದ್ದಾರೆ.

# ಪ್ರಿಯಕರನ ಜತೆ ಜಾಲಿ ಲೈಫ್ ಆಸೆಗೆ ಪತಿಯನ್ನೇ ಕೊಂದ ಪತ್ನಿ!




**ಬೆಳಗಾವಿ ವಾರ್ತೆ ಬೆಳಗಾವಿ:** ಪತಿಯ ಇನ್ಶೂರೆನ್ಸ್ ಪಾಲಿಸಿ ಹಣ ಕಬಳಿಸಿ, ಪ್ರಿಯಕರನೊಂದಿ ಗೆ ಜಾಲಿ ಲೈಫ್ ಮಾಡುವ ಆಸೆಯಲ್ಲಿ ಆಸ್ಪತ್ರೆಯಲ್ಲಿ ಪತಿಯನ್ನು ಕೊಲೆ ಮಾಡಿ ಪ್ರಕರಣ ಮುಚ್ಚಿಹಾಕಲು ಯತ್ನಿಸಿದ ಪತ್ನಿ ಹಾಗೂ ಆಕೆಯ ಪ್ರಿಯಕರ ಯಮಕನ ಮರಡಿ ಪೊಲೀಸರ ಬಲೆಗೆ ಬಿದ್ದಿದ್ದಾರೆ.

ಯಮಕನಮರಡಿ ಜಾತ್ರೆಯ ಸಂದರ್ಭದಲ್ಲಿ ಮಾಜಿ ಸೈನಿಕ ಸಂದೀಪ್ ಮಾಂಜರೆ ಎಂಬುವರು ಅಪಘಾತಕ್ಕೆ ಸಿಲುಕಿ ಗಾಯಗೊಂಡು ಆಸ್ಪತ್ರೆಯಲ್ಲಿ ದಾಖಲಾಗಿದ್ದರು. ಆಸ್ಪತ್ರೆಯಲ್ಲಿ ಚಿಕಿತ್ಸೆಗೆ ಸ್ಪಂದಿಸಿ ಗುಣಮುಖರಾಗುತ್ತಿದ್ದ ಪತಿಯನ್ನು ಕಂಡು ಖುಷಿಯಾಗುವ ಬದಲು ತನ್ನ ಅನೈತಿಕ ಸಂಬಂಧಕ್ಕೆ ಈತ ಅಡ್ಡಬರುತ್ತಾನೆ ಎಂಬ ಕಾರಣಕ್ಕೆ ಸಂದೀಪನ ಕತೆ ಮುಗಿಸುವುದಕ್ಕೆ ಪ್ರಿಯಕರನ ಜತೆ ಸೇರಿ ಆತನ ಪತ್ನಿ ಸ್ಕೆಚ್ ಹಾಕಿದ್ದಾಳೆ.

ತಮ್ಮ ಈ ಕುಕೃತ್ಯಕ್ಕೆ ಆಸ್ಪತ್ರೆ ಸಿಬ್ಬಂದಿಯ ನೆರವು ಪಡೆದುಕೊಂಡಿದ್ದಾರೆ. ಸಂದೀಪ ಮಾಜಿ ಸೈನಿಕನಾಗಿರುವುದರಿಂದ ಆತ ಸತ್ತರೆ 2 ಕೋಟಿ ಇನ್ಶೂರೆನ್ಸ್ ಹಣ ಪಡೆಯಬ ಹುದೆಂದು ಯೋಚಿಸಿ ಸಲೈನ್‌ನಲ್ಲಿ ಕೀಟನಾಶಕ ಬೆರೆಸಿ ದೇಹಕ್ಕೆ ನೀಡಿದ್ದರಿಂದ ಆಸ್ಪತ್ರೆಯಲ್ಲಿ ಸಾವನ್ನಪ್ಪಿದ್ದಾನೆ. ನಂತರ ಹಣದಾಸೆಗೆ ಆಸ್ಪತ್ರೆಯ ಲ್ಯಾಬ್ ಸಿಬ್ಬಂದಿಯವರು ಕೂಡಾ ಕೀಟನಾಶಕದ ವಿಚಾರ ಹೊರಬರದಂತೆ ನೋಡಿಕೊಂಡಿದ್ದಾರೆ.

ಆದರೆ ಸಂದೀಪ ಮರಣದ ನಂತರ ಆತನ ಪತ್ನಿಯ ವರ್ತನೆ ಸಂಬಂಧಿಕರಿಗೆ ಸಂಶಯ ತಂದಿದೆ. ಹಾಗಾಗಿ ಇದೊಂದು ಪೂರ್ವಯೋಜಿತ ಕೊಲೆ ಎಂದು ಪೊಲೀಸರಿಗೆ ಸಂದೇಹ ವ್ಯಕ್ತಪಡಿಸಿದ್ದಾರೆ.

ತಕ್ಷಣ ಕಾರ್ಯಪ್ರವೃತ್ತರಾದ ಯಮಕನಮರಡಿ ಸಿಪಿಐ ಜಾವೇದ್ ಮುಷಾಪುರೆ ಹಲವು ಆಯಾಮಗಳಲ್ಲಿ ತನಿಖೆ ನಡೆಸಿ ಮೃತನ ಪತ್ನಿ ಹಾಗೂ ಆಕೆಯ ಪ್ರಿಯಕರನ ವಿಚಾರಣೆ ನಡೆಸಿದಾಗ ಇದು ಸಹಜ ಸಾವು ಅಲ್ಲ; ಹಣದಾಸೆಗೆ ನಡೆಸಲಾದ ಯೋಜಿತ ಕೊಲೆ ಎಂಬುದು ಸ್ಪಷ್ಟವಾಗಿದೆ. ಇನ್ನಷ್ಟು ಮಾಹಿತಿ ಪಡೆದುಕೊಂಡು ಇವರಿಬ್ಬರ ವಿರುದ್ಧ ಕೇಸು ದಾಖಲಿಸಲಾಗುವುದೆಂದು ಪೊಲೀಸ್ ಮೂಲಗಳು ತಿಳಿಸಿವೆ.

# 40 ವರ್ಷಗಳ ವಾಸಸ್ಥಳ ತೆರವು ವಿವಾದ: ನ್ಯಾಯವಾದಿ ಬಾಹುಸಾಹೇಬ ಕಾಂಬಳೆ ಆಕ್ರೋಶ

**ಬೆಳಗಾವಿ ವಾರ್ತೆ ಅಥಣಿ:** ತಾಲೂಕಿನ ಶಿರಹಟ್ಟಿ ಗ್ರಾಮದ ಕೃಷ್ಣಾ ಮೇಲ್ದಂಡೆ ಯೋಜನೆಯ ಪುನವ ರ್ಸತಿ ಕೇಂದ್ರದ ಸ್ವಾಧೀನದಲ್ಲಿರುವ ಜಾಗ 'ದಲ್ಲಿ ಕಳೆದ 40 ವರ್ಷಗಳಿಂದ ವಾಸ ವಾಗಿರುವ 500ಕ್ಕೂ ಹೆಚ್ಚು ಕುಟುಂಬ ಗಳನ್ನು ಯಾವುದೇ ನೋಟಿಸ್ ನೀಡದೆ ತೆರವುಗೊಳಿಸಲು ಅಧಿಕಾರಿಗಳು ಮುಂದಾ ಗಿದ್ದಾರೆ ಎಂದು ಆರೋಪಿಸಿ ಬಹುಜನ ಸಮಾಜ ಪಕ್ಷದ ಕಾರ್ಯ ಕರ್ತರು & ಶಿರಹಟ್ಟಿ ಗ್ರಾಮಸ್ಥರು ತಹಶೀಲ್ದಾರರ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದರು.

ಈ ವೇಳೆ ಬಹುಜನ ಸಮಾಜ ಪಕ್ಷಕ ಬೆಳಗಾವಿ ವಲಯ ಉಸ್ತುವಾರಿ ಹಾಗೂ ನ್ಯಾಯವಾದಿ ಬಾಹುಸಾಹೇಬ ಕಾಂಬಳೆ ಮಾತನಾಡಿ ಆರ್, ಸಿ, ನಂ.1 ರ ನಿವಾಸಿಗಳು ಕಳೆದ 40 ವರ್ಷಗಳಿಂದ ಇಲ್ಲಿ ನೆಲೆಸಿದ್ದಾರೆ ಮನೆ ಕಟ್ಟಿಕೊಂಡು ಮಕ್ಕಳನ್ನು ಬೆಳೆಸಿ ಮತದಾರರ ಪಟ್ಟಿ ರೇಷನ್ ಕಾರ್ಡ್ ವಿದ್ಯುತ್ ಬಿಲ್ ಎಲ್ಲವನ್ನೂ ಇಲ್ಲಿಯೇ ಹೊಂದಿದ್ದಾರೆ ಇಷ್ಟೆಲ್ಲ ದಾಖಲೆಗಳಿದ್ದರೂ ಗುರುವಾರ ಮಧ್ಯಾಹ್ನ 1 ಗಂಟೆಗೆ ಅಧಿಕಾರಿಗಳು ಏಕಾಏಕಿ ಬಂದು ಯಾವು ದೇ ಪೂರ್ವ ನೋಟಿಸ್ ನೀಡದೆ ಕಾನೂ ನು ಪ್ರಕ್ರಿಯೆ ಅನುಸರಿಸದೆ ಜಾಗ ಖಾಲಿ ಮಾಡಿ ಖಾಲಿ ಮಾಡದಿದ್ದರೆ ಲಾಠಿ ಚಾ ರ್ಜ್ ಮಾಡುವುದಾಗಿ ಬೆದರಿಕೆ ಹಾಕಿದ್ದಾರೆ ಬೆದರಿಕೆ ಹಾಕುವುದು ಕಾನೂನು ಬಾಹಿರ ಮಾನವೀಯತೆಗೆ ವಿರುದ್ಧವಾದ ನಡೆ ಕೃಷ್ಣಾ ಮೇಲ್ದಂಡೆ ಯೋಜನೆಯ ಪುನರ್ವಸತಿ ಹೆಸರಿನಲ್ಲಿ ಬಡವರನ್ನು ಮತ್ತೆ ನಿರಾಶ್ರಿತರನ್ನಾಗಿ ಮಾಡುವ ಹುನ್ನಾರ ಇದಾಗಿದೆ

**ಸುಪ್ರೀಂ ಕೋರ್ಟ್ ಸ್ಪಷ್ಟವಾಗಿ ಹೇಳಿದೆ:** ದೀರ್ಘಕಾಲದ ವಾಸಸ್ಥಳದಿಂದ ತೆರವು ಮಾಡುವ ಮೊದಲು ನೋಟಿಸ್ ನೀಡಬೇಕು ಅವರ ಮಾತು ಆಲಿಸಬೇಕು ಸೂಕ್ತ ಪುನರ್ವಸತಿ ಕಲ್ಪಿಸಬೇಕೆಂದು ಆದರೆ ಇಲ್ಲಿ ನೈಸರ್ಗಿಕ ನ್ಯಾಯದ ತತ್ವಗಳನ್ನೇ ಗಾಳಿಗೆ ತೂರಲಾಗಿದೆ. 500ಕ್ಕೂ ಹೆಚ್ಚು ಕುಟುಂಬಗಳು, ಮಹಿಳೆಯರು, ಮಕ್ಕಳು, ವೃದ್ಧರು ಬೀದಿಗೆ ಬೀಳುವ ಪರಿಸ್ಥಿತಿ ನಿರ್ಮಾಣವಾಗಿದೆ ನಾವು ಎಷ್ಟೋ ಸಲ ಸ್ಥಳಿಯ ಶಾಸಕರಿಗೂ ಹಾಗೂ ಜನ ಪ್ರತಿನಿಧಿಗಳಿಗೂ ಮನವಿ ಸಲ್ಲಿಸಿದರು ಯಾವುದೆ ಪ್ರಯೋಜನವಾ ಗಿಲ್ಲ ಸರ್ಕಾರ ತಕ್ಷಣ ಮಧ್ಯಪ್ರವೇಶಿಸಿ ಈ ಅಮಾನವೀಯ ತೆರವು ಕಾರ್ಯಾ ಚರಣೆ ನಿಲ್ಲಿಸಬೇಕು ಇಲ್ಲದಿದ್ದರೆ ನಾವು ಕಾನೂನು ಹೋರಾಟದ ಜೊತೆಗೆ ಉಗ್ರ ಪ್ರತಿಭಟನೆಗೂ ಸಿದ್ಧ ಎಂದು ಎಚ್ಚರಿಕೆ ನೀಡಿ ದರು. ಈ ಸಂದರ್ಭದಲ್ಲಿ ಅಥಣಿ ವಕೀಲರ ಸಂಘದ ಮಹಿಳಾ ಪ್ರತಿನಿಧಿ ಗೀತಾ ಕಾಂಬಳೆ, ಬಹುಜನ ಸಮಾಜ ಪಕ್ಷದ ಜಿಲ್ಲಾ ಅಧ್ಯಕ್ಷ ಸಂಜೀವ ಕಾಂಬಳೆ, ರಾಜು ಕಾಂಬಳೆ,ಮಹಾವೀರ ಕಾಂಬಳೆ, ಮುರು ಗೇಶ ಅಥಣಿ ಸೇರಿದಂತೆ ಶಿರಹಟ್ಟಿ ಗ್ರಾಮದ ನಿವಾಸಿಗಳು ಇದ್ದರು.




# ಪ್ರೋತ್ಸಾಹಧನಕ್ಕಾಗಿ ಅರ್ಜಿ ಆಹ್ವಾನ

**ಬೆಳಗಾವಿ ವಾರ್ತೆ ಗದಗ:** 2026-27 ನೇ ಸಾಲಿನಲ್ಲಿ ನಡೆದ ಮೆಟ್ರಿಕ್ ನಂತರದ ವಿವಿಧ ಕೋರ್ಸುಗಳ ಪರೀಕ್ಷೆಗಳಲ್ಲಿ ಪ್ರಥಮ ಪ್ರಯತ್ನದಲ್ಲಿ, ಪ್ರಥಮ ದರ್ಜೆಯಲ್ಲಿ ತೇರ್ಗಡೆಯಾದ ಪರಿಶಿಷ್ಟ ಪಂಗಡದ/ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ಮಂಜೂರು ಮಾಡುವ ಕುರಿತು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಿದ ನಂತರ ಅರ್ಜಿಯ ಪ್ರತಿಯನ್ನು ಹಾಗೂ ಅಗತ್ಯ ದಾಖಲಾತಿಗಳನ್ನು ದೃಢೀಕರಿಸಿ, ಲಗತ್ತಿಸಿ ಸಹಾಯಕ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ ಗದಗ/ಮುಂಡರಗಿ/ನರಗುಂದ/ರೋಣ/ಶಿರಹಟ್ಟಿ ಇಲ್ಲಿಗೆ ಬೇಟಿ ನೀಡಿ ಅರ್ಜಿಯನ್ನು ಸಲ್ಲಿಸಲು ಸೂಚಿಸಿದೆ.

**ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳಿಗೆ:** https://twd.karnataka.gov.in/TWPostPrizemoney/Webpages/validation.aspx ಮೂಲಕ ಅರ್ಜಿಗಳನ್ನು ಸಲ್ಲಿಸುವುದು.

**ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗೆ:** https://swdservices. karnataka. gov.in/PrizeMoneyClientApp/register

ಮೂಲಕ ಅರ್ಜಿಗಳನ್ನು ಸಲ್ಲಿಸುವುದು.

# ಗ್ರಂಥಾಲಯವು ಜ್ಞಾನಾರ್ಜನೆಯ ಮಹತ್ವದ ಹೆಜ್ಜೆಯಾಗಿದ್ದು, ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದುಕೊಳ್ಳಬೇಕು

**ಬೆಳಗಾವಿ ವಾರ್ತೆ ಗೋಕಾಕ:** ಗ್ರಂಥಾಲಯವು ಜ್ಞಾನಾರ್ಜನೆಯ ಮಹತ್ವದ ಹೆಜ್ಜೆಯಾಗಿದ್ದು,ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಇಲ್ಲಿನ ಪ್ರಧಾನ ಕಿರಿಯ ಸಿವಿಲ್ ಹಾಗೂ ಜೆ.ಎಂ.ಎಫ್.ಸಿ ನ್ಯಾಯಾಲಯದ ನ್ಯಾಯಾಧೀಶ ಸಂಪತಕುಮಾರ ಬಳ್ಳೋಲಗಿಡದ ಹೇಳಿದರು.

ಶುಕ್ರವಾರದಂದು ನಗರದ ಶ್ರೀ ಚನ್ನಬಸವೇಶ್ವರ ವಿದ್ಯಾಪೀಠದಲ್ಲಿ ನೂತನವಾಗಿ ನಿರ್ಮಿಸಿದ ಗ್ರಂಥಾಲಯ ಕಟ್ಟಡವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮುಗಿದು ಹೋಗದ ಸಂಪತ್ತು ಎಂದರೆ ಅದು ಜ್ಞಾನ ಸಂಪತ್ತು. ಆ ಸಂಪತ್ತಿನ ಬೆಳವಣಿಗೆಗೆ ಪುಸ್ತಕ ಓದುವ ಹವ್ಯಾಸವನ್ನು ಬೆಳೆಸಿಕೊಳ್ಳಬೇಕು, ಅದಕ್ಕಾಗಿ ಈ ಗ್ರಂಥಾಲಯದ ಸದುಪಯೋಗವನ್ನು ಪಡೆದುಕೊಂಡು ಜ್ಞಾನ ಸಂಪಾದನೆಯನ್ನು ಮಾಡಿ ಅರ್ಥಪೂರ್ಣ ಬದುಕನ್ನು ನಿರ್ಮಿಸಿಕೊಳ್ಳಿ" ಎಂದು ಹೇಳಿದರು.

ಕಾರ್ಯಕ್ರಮ ಸಾನಿಧ್ಯವನ್ನು ಸಂಸ್ಥೆಯ ಅಧ್ಯಕ್ಷ ಶ್ರೀ ಮುರುಘರಾಜೇಂದ್ರ ಮಹಾಸ್ವಾಮಿಗಳು ವಹಿಸಿದ್ದರು.

ಈ ಸಂದರ್ಭದಲ್ಲಿ ಶೂನ್ಯ ಸಂಪಾದನ ಮಠದ ಕಿರಿಯ ಶ್ರೀ ಬಸವಪ್ರಭು ಸ್ವಾಮಿಗಳು, ನ್ಯಾಯವಾದಿ ಸಂಘದ ಅಧ್ಯಕ್ಷ ಸುಭಾಷ ಬಿರಾದಾರ ಪಾಟೀಲ, ನ್ಯಾಯವಾದಿಗಳಾದ ಶಂಕರ ಗೋರೋಶಿ, ಎ.ಸಿ.ಕಂಡರಟ್ಟಿ, ನಿರ್ದೇಶಕರುಗಳಾದ ಮಲ್ಲಿಕಾರ್ಜುನ ಈಟಿ, ವಿವೇಕ ಜತ್ತಿ, ಮುರಗೇಶ ಹುಕ್ಕೇರಿ, ವೀಣಾ ಹಿರೇಮಠ, ಸುಷ್ಮಾ ಪಾಟೀಲ, ರಾಜೇಶ್ವರಿ ಬೆಟ್ಟದಗೌಡರ, ಮಲ್ಲಿಕಾರ್ಜುನ ರೋಟ್ಟಿ, ಭೀಮಶಿ ಹಡಗಿನಾಳ, ಆಡಳಿತಾಧಿಕಾರಿ ಅಡಿವೇಶ ಗವಿಮಠ, ಪ್ರಾಚಾರ್ಯ ಎಸ್.ಕೆ.ಮಠದ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.



ಗೋಕಾಕ: ನೂತನವಾಗಿ ನಿರ್ಮಿಸಿದ ಗ್ರಂಥಾಲಯ ಕಟ್ಟಡವನ್ನು ಉದ್ಘಾಟಿಸುತ್ತಿರುವ ಗಣ್ಯರು.

BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307. Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI, KARNATAKA - 590001